ಗುರುವಾರ, 11.12.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 110


Digital Varthe Kannada Daily
Volume 01 - Issue 110
Thursday 11.12.2025
Price: 5/- Rs
2 Pages Bangalore

PRGI/RNI: KNKAN/25/A1348

ಡಿಜಿಟಲ್ ವಾರ್ತೆ
ಕನ್ನಡಿಗರ ಶಕ್ತಿ
ಕನ್ನಡ ದಿನಪತ್ರಿಕೆ

DIGITAL VARTHE
digitalvarthe@gmail.com
www.digitalvarthe.com

# ಕಲ್ಲು ಎತ್ತಿ ಹಾಕಿ ಯುವಕನ ಬರ್ಬರ ಕೊಲೆ



**ಹಾಸನ:** ಕಲ್ಲು ಎತ್ತಿ ಹಾಕಿ ಯುವಕನನ್ನು ಬರ್ಬರವಾಗಿ ಕೊಲೆ ಮಾಡಿದ ನಂತರ ಶವದ ಮುಂದೆ ನಿಂತು ಕೊಲೆ ಮಾಡಿರುವುದಾಗಿ ಸೆಲ್ಫಿ ವೀಡಿಯೋ ಮಾಡಿ ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಟ್ಟ ಘಟನೆ ಹಾಸನ ನಗರದ ಬಿಟ್ಟಗೋಡನಹಳ್ಳಿ ಬೈಪಾಸ್ ರಸ್ತೆಯ ಪಕ್ಕದಲ್ಲೇ ನಡಿದಿದೆ ಹಾಸನ ತಾಲೂಕು, ಹೂವಿನಹಳ್ಳಿ ಕಾವಲು ಗ್ರಾಮದ ಕೀರ್ತಿ ಕೊಲೆಯಾದ ಯುವಕ.

ಆಲೂರು ತಾಲೂಕಿನ, ಕಣಗಾಲ್ ಗ್ರಾಮದ ಉಲ್ಲಾಸ್ ಹಾಗೂ ಇತರರು ಕೀರ್ತಿಯನ್ನು ಕೊಲೆಗೈದು ಸೆಲ್ಫಿ ವೀಡಿಯೋ ಮಾಡಿದ್ದಾರೆ. ಕೀರ್ತಿ, ಉಲ್ಲಾಸ್ ಆಟೋ ಚಾಲಕರಾಗಿದ್ದು, ಸ್ನೇಹಿತರಾಗಿದ್ದರು. ಸೋಮವಾರ ಬೆಳಗ್ಗೆ ಕೀರ್ತಿ ಮನೆಯಿಂದ ಹೋಗಿದ್ದ. ಆನಂತರದಲ್ಲಿ ಉಲ್ಲಾಸ್ ಜೊತೆ ಜಗಳವಾಗಿತ್ತು ಎನ್ನಲಾಗಿದೆ. ಬಳಿಕ ನಿರ್ಜನ ಪ್ರದೇಶಕ್ಕೆ ಹೋಗಿದ್ದ ನಾಲ್ಕೈದು ಯುವಕರು ಗಾಂಜಾ ಸೇವಿಸಿ ನಂತರ ಕೀರ್ತಿ ಮೇಲೆ ಕಲ್ಲು ಎತ್ತಿ ಹಾಕಿ ಹತ್ಯೆಗೈದಿದ್ದಾರೆ. ಸೋಮವಾರ ಸಂಜೆಯ ನಂತರ ಉಲ್ಲಾಸ್ ತನ್ನ ಇನ್ಸ್ಟಾಗ್ರಾಂ ಪೋಸ್ಟ್ ಹಾಗೂ ವ್ಯಾಟ್ಸಪ್ ಗ್ರೂಪ್‌ಗಳಲ್ಲಿ ವೀಡಿಯೋ ಹರಿಬಿಟ್ಟಿದ್ದಾರೆ. ನಾನು ಇವನನ್ನು ಮರ್ಡರ್ ಮಾಡಿದ್ದೇನೆ.

ನಾನು ಈಗ ಬೆಳೆದಿದ್ದಾನೆ ಎಂದು ಹೇಳುವ ಜೊತೆಗೆ ಕೆಲವು ಅಶ್ಲೀಲ ಪದಗಳನ್ನು ಮಾತನಾಡಿದ ವೀಡಿಯೋ ಹರಿಬಿಟ್ಟಿದ್ದಾರೆ. ವೀಡಿಯೋ ನೋಡಿದ ಪೊಲೀಸರು ಕೊಲೆ ಆಗಿರುವ ಜಾಗವನ್ನು ಹುಡುಕಾಡಲು ಪರದಾಡಿದ್ದಾರೆ. ಕೊನೆಗೆ ವೀಡಿಯೋದಲ್ಲಿದ್ದ ಗ್ಯಾರೇಜ್ ವಿಳಾಸ ತಿಳಿದು ಸ್ಥಳಕ್ಕೆ ಹೋಗಿ ಪರಿಶೀಲಿಸಿದಾಗ ಕೀರ್ತಿ ಶವ ಪತ್ತೆಯಾಗಿದೆ. ಸ್ಥಳಕ್ಕೆ ಶ್ವಾನದಳ, ಬೆರಳಚ್ಚು ತಜ್ಞರು, ಸೋಕೋ ತಂಡ ಭೇಟಿ ನೀಡಿ ಪರಿಶೀಲನೆ ನಡೆಸಿದೆ. ಮೃತದೇಹದ ಮರಣೋತ್ತರ ಪರೀಕ್ಷೆಗಾಗಿ ಜಿಲ್ಲಾಸ್ಪತ್ರೆ ಶವಾಗಾರದಲ್ಲಿ ಇರಿಸಲಾಗಿದೆ. ಹಾಸನ ನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

# ಕುಖ್ಯಾತ ಬ್ಯಾಂಡ್ ಬಜಾ ಗ್ಯಾಂಗ್ ಬೀಳ್ಕೊಂಡ ಖಾಕಿ ಜಾಲದಲ್ಲಿ; ಅರ್ಧ ಕೋಟಿ ಮೌಲ್ಯದ ಚಿನ್ನ ಜಪ್ತಿ



**ದಾವಣಗೆರೆ:** ಪ್ರತಿಷ್ಠಿತ ಮದುವೆ ಸಮಾರಂಭಗಳಲ್ಲಿ ಪಾಲ್ಗೊಂಡು ಜನರ ಗಮನ ಬೇರೆಡೆ ಸೆಳೆದು ಕೈಚಳಕ ತೋರುತ್ತಿದ್ದ ಮಧ್ಯಪ್ರದೇಶದ ಕುಖ್ಯಾತ ಬ್ಯಾಂಡ್ ಬಜಾ ಗ್ಯಾಂಗ್‌ನ ರಾಬರಿ ಪ್ರಕರಣವನ್ನು ದಾವಣಗೆರೆ ಪೊಲೀಸರು ಭೇದಿಸಿದ್ದಾರೆ. ಮಧ್ಯಪ್ರದೇಶದಲ್ಲಿ ಆರೋಪಿಗಳಿಂದ 51.49 ಲಕ್ಷ ರೂ. ಮೌಲ್ಯದ ಚಿನ್ನಾಭರಣವನ್ನು ದಾವಣಗೆರೆ ಗ್ರಾಮಾಂತರ ವಿಭಾಗದ ಪೊಲೀಸರು ಜಪ್ತಿ ಮಾಡಿದ್ದು, ದಾಳಿ ವೇಳೆ ಇಬ್ಬರು ಆರೋಪಿಗಳು ತಪ್ಪಿಸಿಕೊಂಡಿದ್ದಾರೆ.

ಪ್ರತಿಷ್ಠಿತರ ಮದುವೆ ಸಮಾರಂಭಗಳಲ್ಲಿ ನೆರೆದಿದ್ದವರ ಗಮನ ಬೇರೆಡೆ ಸೆಳೆದು ಕಳ್ಳತನ ಮಾಡೋದು ಈ ಗ್ಯಾಂಗ್‌ನ ಕಾಯಕವಾಗಿತ್ತು. ನ.14ರಂದು ಅಪೂರ್ವ ರೆಸಾರ್ಟ್‌ನಲ್ಲಿಯೂ ಆರೋಪಿಗಳು ಕೈಚಳಕ ತೋರಿದ್ದರು. ಮದುವೆ ಸಮಾರಂಭದಲ್ಲಿ ಬಾಲಕಿ ನೃತ್ಯ ಮಾಡುತ್ತಿದ್ದ ವೇಳೆ ಚಿನ್ನಾಭರಣವಿದ್ದ ಬ್ಯಾಗ್ ಕೆಳಗಿಟ್ಟು ಚಪ್ಪಾಳೆ ತಟ್ಟುವಷ್ಟರಲ್ಲಿ ಅದನ್ನು ಗ್ಯಾಂಗ್ ಎಸ್ಕೇಪ್ ಮಾಡಿತ್ತು. 535 ಗ್ರಾಂ ಆಭರಣವಿದ್ದ ಬ್ಯಾಗ್‌ನ ಬ್ಯಾಂಡ್ ಬಜಾ ಗ್ಯಾಂಗ್ ಸದಸ್ಯರಾದ ಕರಣ್ ವರ್ಮಾ, ವಿನಿತ್ ಸಿಸೋಡಿಯಾ ಕದ್ದು ಪರಾರಿಯಾಗಿದ್ದರು. ಖಚಿತ ಮಾಹಿತಿ ಆಧರಿಸಿ ದಾಳಿ

ಪ್ರಕರಣ ಸಂಬಂಧ ಮಧ್ಯಪ್ರದೇಶದ ಪರೋರಿನಗರಕ್ಕೆ ತೆರಳಿದ್ದ ದಾವಣಗೆರೆ ಪೊಲೀಸರು ವೇಷ ಬದಲಿಸಿ ಕಳ್ಳರಿಗಾಗಿ ಶೋಧ ನಡೆಸಿದ್ದಾರೆ. ಆರೋಪಿಗಳು ಮಧ್ಯವರ್ತಿಗೆ ಚಿನ್ನಾಭರಣವಿದ್ದ ಬ್ಯಾಗ್ ಬಗ್ಗೆ ಮಾಹಿತಿ ನೀಡಿದ್ದ ಖಚಿತ ಮಾಹಿತಿ ಆಧರಿಸಿ ದಾಳಿ ನಡೆಸಲಾಗಿದ್ದು, ಚಿನ್ನಾಭರಣ ಜಪ್ತಿ ಮಾಡಲಾಗಿದೆ. ಮಧ್ಯಪ್ರದೇಶದ ರಾಜ್‌ಗಢ ಜಿಲ್ಲೆಯ ನರಸಿಂಗ್ ತಾಲೂಕಿನ ಕಡಿಯಾಸಾಂಸಿ, ಗುಲ್ ಖೇಡಾ ಗ್ರಾಮದ ಗ್ಯಾಂಗ್ ಕಳ್ಳತನ ನಡೆಸಿದ್ದು ಈ ವೇಳೆ ಗೊತ್ತಾಗಿದ್ದು, ತಲತಲಾಂತರದಿಂದ ಕಳ್ಳತನವನ್ನೇ ಇಲ್ಲಿನ ಕೆಲವು ಜನರು ವೃತ್ತಿ ಮಾಡಿಕೊಂಡಿರುವ ವಿಷಯ ಬೆಳಕಿಗೆ ಬಂದಿದೆ.

ಆರೋಪಿಗಳಿಗಾಗಿ ಮುಂದುವರಿದ ಶೋಧ

ನ.14ರಂದು 200 ಗ್ರಾಂ ಚಿನ್ನದ ಡಾಬು, 50 ಗ್ರಾಂ ಅವಲಕ್ಕಿ ಸರ, 60 ಗ್ರಾಂ ಲಾಂಗ್ ಚೈನ್, ತಲಾ 20 ಗ್ರಾಂ ತೂಕದ 4 ನೆಕ್‌ಲೆಸ್, 30 ಗ್ರಾಂ ತೂಕದ 2 ಸರ ಸೇರಿ 16 ಆಭರಣವಿದ್ದ ಬ್ಯಾಗ್‌ನ ಗ್ಯಾಂಗ್ ಎಗರಿಸಿತ್ತು. ಕಳುವಾಗಿದ್ದ ಬ್ಯಾಗ್ ನಲ್ಲಿದ್ದಚಿನ್ನಾಭರಣಗಳ ಪೈಕಿ ಬಹುತೇಕ ಆಭರಣಗಣ್ನು ಈಗ ಜಪ್ತಿ ಮಾಡಲಾಗಿದೆ. ಆರೋಪಿಗಳಾದ ಕರಣ್ ವರ್ಮಾ, ವಿನಿತ್ ಸಿಸೋಡಿಯಾಗಾಗಿ ಶೋಧ ಮುಂದುವರಿದಿದೆ ಎಂದು ದಾವಣಗೆರೆ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ಮಾಹಿತಿ ನೀಡಿದ್ದಾರೆ.

# ಆರೋಗ್ಯ ಆತಂಕ ಹೆಚ್ಚಿದ ಹಿನ್ನಲೆಯಲ್ಲಿ 11 ಕಾರ್ಖಾನೆಗಳಿಗೆ ಬಿತ್ತು ಬೀಗ



**ತುಮಕೂರು:**ಜಿಲ್ಲೆಯಲ್ಲಿ ದಿನದಿಂದ ದಿನಕ್ಕೆ ವಾಯು ಮಾಲಿನ್ಯ ವಿಪರೀತವಾಗುತ್ತಿದೆ. ಗಾಳಿಯ ಗುಣಮಟ್ಟದಲ್ಲೂ ದಿನೇದಿನೇ ಕುಸಿತ ಉಂಟಾಗುತ್ತಿದೆ. ಇದೆಲ್ಲರದ ಜೊತೆಗೆ ನಗರದಲ್ಲೀಗ ಕಲುಷಿತ ಗಾಳಿಯಿಂದ ಆರೋಗ್ಯದ ಮೇಲೆ ಪರಿಣಾಮ ಬೀರುವ ಆತಂಕ ಹೆಚ್ಚಾಗಿದೆ. ಇದಕ್ಕೆ ಸಾಕ್ಷಿ ಎಂಬಂತೆ ಕಳೆದ ಐದು ವರ್ಷದಲ್ಲಿ ವಾಯು ಮಾಲಿನ್ಯಕ್ಕೆ ಕಾರಣವಾದ 11 ಕೈಗಾರಿಕೆಗಳಿಗೆ ಅಧಿಕಾರಿಗಳು ಬೀಗ ಹಾಕಿದ್ದು, ನೂರಾರು ಕಾರ್ಖಾನೆಗಳಿಗೆ ನೋಟಿಸ್ ನೀಡಿದ್ದಾರೆ. 11 ಕೈಗಾರಿಕೆಗಳು ಬಂದ್

ಕೈಗಾರಿಕಾ ಹಬ್ ಆಗಿ ಬೆಳೆಯುತ್ತಿರುವ ತುಮಕೂರಿಗೆ ಮಾಲಿನ್ಯ ನಿಯಂತ್ರಣ ಮಂಡಳಿಯ ವರದಿ ಶಾಕ್ ಉಂಟುಮಾಡಿದೆ. ಜಿಲ್ಲೆಯ ವಾತಾವರಣ ದಿನದಿಂದ ದಿನಕ್ಕೆ ಹದಗೆ ಡುತ್ತಿರುವ ಆತಂಕಕಾರಿ ಅಂಶ ಹೊರಬಿದ್ದಿದೆ. ಅನಿಯಂತ್ರಿತವಾಗಿ ಹೊರ ಸೂಸುವ ಕೆಟ್ಟ ಹೊಗೆ ಹಾಗೂ ಮಾಲಿನ್ಯ ನಿಯಂತ್ರಣ ನಿಯಮ ಉಲ್ಲಂಘನೆ ಆಧಾರದ ಮೇರೆಗೆ ಸುಮಾರು 11 ಕೈಗಾರಿಕೆಗಳಿಗೆ ಬೀಗ ಹಾಕಲಾಗಿದೆ.

ಮಾಲಿನ್ಯ ನಿಯಂತ್ರಣ ಮಂಡಳಿಯಿಂದ 2020-21ನೇ ಸಾಲಿನಿಂದ 2024-25ರವರೆಗೆ ಈ ಕ್ರಮ ಕೈಗೊಳ್ಳಲಾಗಿದ್ದು, ಇದರ ಹೊರತಾಗಿ ಸುಮಾರು 640 ಕೈಗಾರಿಕೆಗಳಿಗೆ ಕಾರಣ ಕೇಳಿ ನೋಟಿಸ್ ಜಾರಿ ಮಾಡಲಾಗಿದೆ. ಜೊತೆಗೆ ಕೆಲ ನಿಯಮ ಉಲ್ಲಂಘನೆ ಬಗ್ಗೆ ಆರೋಪ ಕೇಳಿ ಬಂದ ಬೆನ್ನಲ್ಲೇ ಸುಮಾರು 56 ಕೈಗಾರಿಕೆಗಳನ್ನು ಯಾಕೆ ಮುಚ್ಚಬಾರದೆಂದು ಅಂತಿಮ ನೋಟಿಸ್ ಕೊಡಲಾಗಿದ್ದು, ಕೈಗಾರಿಕೆಗಳ ಉತ್ತರಕ್ಕಾಗಿ ಅಧಿಕಾರಿಗಳು ಕಾಯುತಿದ್ದಾರೆ.

ತುಮಕೂರು ದಿನದಿಂದ ದಿನಕ್ಕೆ ಬೆಳೆಯುತ್ತಿದೆ. ಶಿಕ್ಷಣ, ಕೃಷಿ ಜೊತೆಗೆ ಕೈಗಾರಿಕಾ ವಲಯವೂ ದೊಡ್ಡ ದೊಡ್ಡ ಕಾರ್ಖಾನೆಗಳಿಗೆ ಕೈ ಬೀಸಿ ಕರೆಯುತ್ತಿದೆ. ಅದರಂತೆ ತುಮಕೂರು ನಗರದ ಹೊರವಲಯದ ಕೈಗಾರಿಕಾ ಪ್ರದೇಶಗಳತ್ತ ನೂರಾರು ಉದ್ದಿಮೆಗಳು, ಕಾರ್ಖಾನೆಗಳು ತಲೆ ಎತ್ತುತ್ತಿವೆ. ಈ ಕಾರ್ಖಾನೆಗಳು ಹೊರ ಸೂಸುವ ಹೊಗೆ, ತ್ಯಾಜ್ಯದಿಂದ ಗಾಳಿ ಕಲುಷಿತವಾಗುತ್ತಿದೆ. ವಾಯು ಮಾಲಿನ್ಯ ನಿಯಂತ್ರಣಕ್ಕೆ ಪೂರಕವಾದ ಕಾರ್ಯ ನಡೆಯುತ್ತಿಲ್ಲ. ಮಂಡಳಿಯಿಂದ ನೋಟಿಸ್ ಜಾರಿ ಮಾಡಲಾಗುತ್ತಿದೆ ಹೊರತು ಕೈಗಾರಿಕೆ ಮಾಲೀಕರ ವಿರುದ್ಧ ಯಾವುದೇ ಕಟ್ಟುನಿಟ್ಟಿನ ಕ್ರಮಕೈಗೊಳ್ಳುತ್ತಿಲ್ಲ.

ಆರೋಗ್ಯ ಸಮಸ್ಯೆ ಆತಂಕ

ಜಿಲ್ಲೆಯಲ್ಲಿ ಪ್ರಮುಖವಾಗಿ ವಸಂತನರ ಸಾಪುರ, ಅಂತರಸನಹಳ್ಳಿ, ಹಿರೇಹಳ್ಳಿ ಸೇರಿ ಸುತ್ತಮುತ್ತಲಿನ ಭಾಗದಲ್ಲಿ ಕೈಗಾರಿಕೆಗಳ ಆರಂಭಕ್ಕೆ ಸಾವಿರಾರು ಎಕರೆ ಜಾಗ ಕಾಯ್ದಿರಿಸಲಾಗಿದೆ. ಇಲ್ಲಿ ನಿರೀಕ್ಷಿತ ಮಟ್ಟದಲ್ಲಿ ಕೈಗಾರಿಕೆಗಳು ಶುರುವಾಗಿಲ್ಲ. ಆದರೆ ಈಗಾಗಲೇ ಕಾರ್ಯಾರಂಭ ಮಾಡಿದ ಕೆಲ ಕೈಗಾರಿಕೆ, ಉದ್ದಿಮೆಗಳು ಪರಿಸರ ಸಂರಕ್ಷಣೆಗೆ ಒತ್ತು ನೀಡುತ್ತಿಲ್ಲ ಎಂಬುದು ಮಾಲಿನ್ಯ ನಿಯಂತ್ರಣ ಇಲಾಖೆಯ ಅಂಕಿ ಅಂಶಗಳೇ ಹೇಳುತ್ತಿವೆ. ಇನ್ನು ಈ ರೀತಿಯ ಕಾರ್ಖಾನೆಗಳ ನಡೆಯಿಂದ ಕೈಗಾರಿಕಾ ಪ್ರದೇಶಗಳ ಸುತ್ತಮುತ್ತಲಿನ ಜನರಲ್ಲಿ ಆರೋಗ್ಯ ಸಮಸ್ಯೆ ಹೆಚ್ಚಾಗುವ ಆತಂಕ ಶುರುವಾಗಿದೆ.

ನಗರದ ಹೊರ ಭಾಗದಲ್ಲಿನ ಕೈಗಾರಿಕೆಗಳಿಂದ ವಾಯು ಮಾಲಿನ್ಯ ಹೆಚ್ಚಾದರೆ, ನಗರದ ಒಳಗಡೆ ವಾಹನಗಳ ಅತಿಯಾದ ಓಡಾಟ ಜನರಿಗೆ ಕಿರಿಕಿರಿ ಎನಿಸುತ್ತಿದೆ. ತುಮಕೂರು ಪ್ರಾದೇಶಿಕ ಸಾರಿಗೆ ಅಧಿಕಾರಿ ಕಚೇರಿಯಲ್ಲಿಯೇ 5,55,531 ಬೈಕ್‌ಗಳು, 67 ಸಾವಿರ ಕಾರುಗಳು ನೋಂದಣಿಯಾಗಿವೆ. ಗೂಡ್ಸ್ ಲಾರಿ, ಕೆಎಸ್‌ಆರ್‌ಟಿಸಿ, ಖಾಸಗಿ ಮತ್ತು ಶಾಲಾ-ಕಾಲೇಜು ಬಸ್‌ಗಳು ಸೇರಿದಂತೆ ಒಟ್ಟು 1887 ಬಸ್‌ಗಳು ಪ್ರತಿನಿತ್ಯ ಓಡಾಡುತ್ತಿವೆ. ಇವುಗಳಿಂದ ಬರುವ ಅಪಾಯಕಾರಿ ಹೊಗೆ ಜಿಲ್ಲೆಯ ಜನತೆಯನ್ನು ಹೈರಾಣಾಗಿಸಿದೆ.

# ನೈಟ್‌ಕ್ಲಬ್ ಬೆಂಕಿ ದುರಂತ ಕೇಸ್; ಕ್ಲಬ್‌ನ ಸಹ-ಮಾಲೀಕ ಬಂಧನ




**ಪಣಜಿ:** ಗೋವಾ ನೈಟ್‌ಕ್ಲಬ್‌ನಲ್ಲಿ ಬೆಂಕಿ ಅವಘಡಕ್ಕೆ 25 ಮಂದಿ ಸಾವು ಪ್ರಕರಣದಲ್ಲಿ ಕ್ಲಬ್‌ನ ನಾಲ್ವರು ಮಾಲೀಕರ ಪೈಕಿ ಒಬ್ಬನನ್ನು ಪೊಲೀಸರು ಬಂಧಿಸಿದ್ದಾರೆ. ಅಜಯ್ ಗುಪ್ತಾನನ್ನು ಗೋವಾ ಪೊಲೀ ಸರು ಬಂಧಿ ಸಿದ್ದಾರೆ. ಲುಕ್‌ಔಟ್ ನೋಟಿಸ್ ಹೊರಡಿಸಿದ ಬಳಿಕ ಬಂಧಿಸಲಾಗಿದೆ. ಬೆನ್ನುಮೂಳೆಯ ಕಾಯಿಲೆಯಿಂದ ಬಳಲುತ್ತಿದ್ದ ಗುಪ್ತಾ ದೆಹಲಿಯ ಲಜಪತ್ ನಗರದ ಖಾಸಗಿ ಆಸ್ಪತ್ರೆಗೆ ಚಿಕಿತ್ಸೆ ಪಡೆಯುತ್ತಿದ್ದರು ಉತ್ತರ ಗೋವಾದಲ್ಲಿರುವ 'ಬಿರ್ಚ್ ಬೈ ರೋಮಿಯೋ ಲೇನ್' ಎಂಬ ನೈಟ್ ಕ್ಲಬ್‌ನಲ್ಲಿ ಸಂಭವಿಸಿದ ಭೀಕರ ಬೆಂಕಿ ಅವಘಡದ ನಂತರ ಅಜಯ್ ಗುಪ್ತಾ ಸಂಕಷ್ಟದಲ್ಲಿ ಸಿಲುಕಿದ್ದಾರೆ.

ಸಹೋ ದರರಾದ ಸೌರಭ್ ಲೂಥ್ರಾ ಮತ್ತು ಗೌರವ್ ಲೂಥ್ರಾ ಅವರೊಂದಿಗೆ ಗುಪ್ತಾ ಕೂಡ ನೈಟ್‌ಕ್ಲಬ್‌ನ ಸಹ-ಮಾಲೀ ಕತ್ವ ಹೊಂದಿದ್ದಾರೆ. ಬೆಂಕಿ ಅವಘಡ ಬೆನ್ನಲ್ಲೇ ಲೂಥ್ರಾ ದಂಪತಿ ಥೈಲ್ಯಾಂಡ್‌ನ ಫುಕೆಟ್‌ಗೆ ಎಸ್ಕೇಪ್ ಆಗಿದ್ದಾರೆ. ಅವರನ್ನು ಮರಳಿ ಕರೆತರಲು ಪ್ರಯತ್ನಗಳು ನಡೆಯುತ್ತಿವೆ. ಪೊಲೀಸರು ತನ್ನನ್ನು ಬಂಧಿಸುತ್ತಾರೆಂದು ಅಜಯ್ ಗುಪ್ತಾ ಆಸ್ಪತ್ರೆಗೆ ದಾಖಲಾ ಗಿದ್ದಾರೆ. ಬೆನ್ನುಮೂಳೆಯ ಸಮಸ್ಯೆಯೆಂದು ಸ್ವತಃ ತಾನೇ ಆಸ್ಪತ್ರೆಗೆ ದಾಖಲಾಗಿದ್ದಾರೆ. 3-4 ದಿನಗಳ ಕಾಲ ಆಸ್ಪತ್ರೆಯಲ್ಲಿಯೇ ಇರುವುದು ಯೋಜನೆಯಾಗಿತ್ತು.

ಈ ಅವಧಿಯಲ್ಲಿ ಬೇರೆ ಪ್ಲ್ಯಾನ್ ಮಾಡಿ ಬಂಧನದಿಂದ ಪಾರಾಗಲು ಯೋಜಿಸಿದ್ದರು ಈ ಪ್ರಕರಣದಲ್ಲಿ ಗೋವಾ ಪೊಲೀಸರಿಗೆ ಸಹಾಯ ಮಾಡುತ್ತಿರುವ ದೆಹಲಿ ಪೊಲೀಸ್ ಅಪರಾಧ ವಿಭಾಗದ ಅಧಿಕಾರಿಗಳು, ಗುಪ್ತಾ ಪ್ಲ್ಯಾನ್ ವಿಫಲಗೊಳಿಸಿದ್ದಾರೆ. ಗುಪ್ತಾ ಅವರನ್ನು ವಶಕ್ಕೆ ಪಡೆಯಲಾಗಿದೆ. ಗೋವಾಕ್ಕೆ ಕರೆದೊಯ್ಯುವ ಮೊದಲು ನ್ಯಾಯಾಲಯಕ್ಕೆ ಹಾಜರುಪಡಿಸಲಾಗುವುದು.

# ಹೆಣ್ಣಿಗಾಗಿ ನಡೆಯಿತು ಜಗಳ, ಕೊಲೆ, ಸ್ನೇಹಿತನನ್ನು ಕೊಂದು ದೇಹ ಕತ್ತರಿಸಿ ಎಸೆದ ಯುವಕ





**ಗುಜರಾತ್:**ಆರು ದಿನಗಳಿಂದ ನಾಪತ್ತೆಯಾಗಿದ್ದ 20 ವರ್ಷದ ಯುವಕ ಶವವಾಗಿ ಪತ್ತೆಯಾಗಿರುವ ಘಟನೆ ಗುಜರಾತ್‌ನಲ್ಲಿ ನಡೆದಿದೆ. ಮಹಿಳೆಯೊಬ್ಬರ ವಿಚಾರಕ್ಕೆ ಸಂಬಂಧಿಸಿದಂತೆ ಇಬ್ಬರು ಸ್ನೇಹಿತರ ನಡುವೆ ಜಗಳವಾಗಿತ್ತು. ಆ ಜಗಳ ತಾರಕಕ್ಕೇರಿ ರಮೇಶ್ ಮಹೇಶ್ವರಿ ಎಂಬುವವರನ್ನು ಸ್ನೇಹಿತ ಕಿಶೋರ್ ಕೊಲೆ ಮಾಡಿದ್ದಷ್ಟೇ ಅಲ್ಲದೆ ದೇಹವನ್ನು ತುಂಡು ತುಂಡಾಗಿ ಕತ್ತರಿಸಿದ್ದರು ಎನ್ನುವ ಮಾಹಿತಿ ಲಭ್ಯವಾಗಿದೆ.


ನಖತ್ರಾಣದ ಮುರು ಗ್ರಾಮದಿಂದ ರಮೇಶ್ ಮಹೇಶ್ವರಿ ನಾಪತ್ತೆಯಾಗಿದ್ದರು. ಇದರಿಂದಾಗಿ ಪೊಲೀಸರು ನಾಪತ್ತೆ ದೂರು ದಾಖಲಿಸಿಕೊಂಡು ಹುಡುಕಾಟ ಆರಂಭಿಸಿದ್ದರು. ತನಿಖೆ ಮುಂದುವರೆದಂತೆ, ಅವರ ಸ್ನೇಹಿತ ಕಿಶೋರ್ ಮೇಲೆ ಅನುಮಾನ ಬಂದಿತ್ತು. ಆತನನ್ನು ವಿಚಾರಣೆಗಾಗಿ ವಶಕ್ಕೆ ಪಡೆಯಲಾಗಿತ್ತು. ವಿಚಾರಣೆಯ ಸಮಯ ದಲ್ಲಿ, ಪ್ರಕರಣಕ್ಕೆ ಸಂಬಂಧಿಸಿದಂತೆ ಅಪ್ರಾಪ್ತ ಬಾಲಕನನ್ನೂ ಒಳಗೊಂಡಿದ್ದು, ಕಿಶೋರ್, ತಮ್ಮಿಬ್ಬರಿಗೂ ಪರಿಚಿತಳಾದ ಮಹಿಳೆಯ ವಿಷಯದಲ್ಲಿ ನಡೆದ ವಾಗ್ವಾದದ ನಂತರ ರಮೇಶ್ ಅವರನ್ನು ಕೊಲೆ ಮಾಡಿದ್ದಾಗಿ ಒಪ್ಪಿಕೊಂಡಿದ್ದಾನೆ. ಪೊಲೀಸರ ಪ್ರಕಾರ, ಕಿಶೋರ್ ಆ ಮಹಿಳೆಗೆ ಇನ್‌ಸ್ಟಾಗ್ರಾಮ್‌ನಲ್ಲಿ ಸಂದೇಶ ಕಳುಹಿಸಿ,

ತನ್ನೊಂದಿಗೆ ಸಂಬಂಧ ಹೊಂದುವಂತೆ ಒತ್ತಡ ಹೇರಿದ್ದ. ಆಕೆ ರಮೇಶ್‌ಗೆ ಮಾಹಿತಿ ನೀಡಿದ್ದರಿಂದ ಇಬ್ಬರು ಸ್ನೇಹಿತರ ನಡುವೆ ಘರ್ಷಣೆ ಉಂಟಾಗಿತ್ತು. ಇದರಿಂದ ಬೇಸತ್ತ ಕಿಶೋರ್ ಆತನನ್ನು ಕೊಲ್ಲಲು ನಿರ್ಧರಿಸಿದ್ದ ಎನ್ನಲಾಗಿದೆ. ವಿಚಾರಣೆಯ ನಂತರ, ಕಿಶೋರ್ ರಮೇಶ್‌ನನ್ನು ಗ್ರಾಮದ ಹೊರವಲಯಕ್ಕೆ ಕರೆದೊಯ್ದು ಕೊಲೆ ಮಾಡಿ, ನಂತರ ಚಾಕುವಿನಿಂದ ತಲೆ, ಕೈ ಮತ್ತು ಕಾಲುಗಳನ್ನು ಕತ್ತರಿಸಿದ್ದಾನೆ ಎಂದು ಪೊಲೀಸರು ಹೇಳಿದ್ದಾರೆ. ದೇಹದ ಭಾಗಗಳನ್ನು ಕೊಳವೆ ಬಾವಿಗೆ ಎಸೆದು, ಉಳಿದ ದೇಹವನ್ನು ಹತ್ತಿರದಲ್ಲೇ ಹೂಳಲಾಗಿದೆ.

ತಪ್ಪೊಪ್ಪಿಗೆಯ ಮೇರೆಗೆ ಕಾರ್ಯಾಚರಣೆ ನಡೆಸಿದ ನಖತ್ರಾಣ ಪೊಲೀಸರು ಮತ್ತು ಜಿಲ್ಲಾಡಳಿತ ಸ್ಥಳಕ್ಕೆ ಭೇಟಿ ನೀಡಿ, ಹೂತು ಹಾಕಲಾದ ಶವವನ್ನು ಹೊರತೆಗೆದು, ಕೊಳವೆ ಬಾವಿಯಿಂದ ಕತ್ತರಿಸಿದ ಭಾಗಗಳನ್ನು ಹೊರತೆಗೆದರು. ಹೆಚ್ಚಿನ ತನಿಖೆ ನಡೆಯುತ್ತಿದೆ.

# ಪುನೀತ್ ಕೆರೆಹಳ್ಳಿ ಸೇರಿ ಮೂವರ ವಿರುದ್ಧ

## ಮ್ಯಾನ್ಮಾರ್ ನಿರಾಶ್ರಿತನ ಮೇಲೆ ಹಲ್ಲೆ ಪ್ರಕರಣ ದಾಖಲು



**ಬೆಂಗಳೂರು:** ನಗರದ ಸಿ.ಕೆ. ಅಚ್ಚುಕಟ್ಟು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಚಿಂದಿ ಹಾಯುವ ಕೆಲಸ ಮಾಡುತ್ತಿದ್ದ ಮ್ಯಾನ್ಮಾರ್ ಮೂಲದ ಜಹಾಂಗೀರ್ ಅಲಿ ಎಂಬ ವ್ಯಕ್ತಿ ಮೇಲೆ ಹಲ್ಲೆ ನಡೆದಿರುವ ಹಿನ್ನೆಲೆಯಲ್ಲಿ ಪುನೀತ್ ಕೆರೆಹಳ್ಳಿ ಸೇರಿದಂತೆ ಮೂವರ ವಿರುದ್ಧ ಎಫ್‌ಐಆರ್ ದಾಖಲಾಗಿದೆ.

ಯುಎಸ್‌ಎಚ್‌ಸಿಆರ್‌ನಿಂದ ನಿರಾಶ್ರಿತ ಕಾರ್ಡ್ ಪಡೆದಿರುವ ಜಹಾಂಗೀರ್ ಅಲಿ, ನಿನ್ನೆ ಸಿ.ಕೆ. ಅಚ್ಚುಕಟ್ಟು ಪ್ರದೇಶದಲ್ಲಿ ತೊಡಗಿದ್ದ ವೇಳೆ, ತಡೆಯಲ್ಪಟ್ಟು ಪ್ರಶ್ನೆ ಮಾಡುವ ಹೆಸರಿನಲ್ಲಿ ತನ್ನ ಮೇಲೆ ಹಲ್ಲೆ ನಡೆಸಲಾಗಿದೆ ಎಂದು ದೂರು ನೀಡಿದ್ದಾರೆ.

ತಾನೊಂದು ರೆಫ್ಯೂಜಿ ಕಾರ್ಡ್ ಹೊಂದಿದ್ದೇನೆ ಎಂದು ತಿಳಿಸಿದರೂ, ಆರೋಪಿಗಳು ಬಿಡದೆ ಹಲ್ಲೆ ನಡೆಸಿದ್ದಾರೆಂದು ಜಹಾಂಗೀರ್ ದೂರಿನಲ್ಲಿ ತಿಳಿಸಿದ್ದಾರೆ. ಈ ಸಂಬಂಧ ಪುನೀತ್ ಕೆರೆಹಳ್ಳಿ ಸೇರಿ ಮೂವರ ವಿರುದ್ಧ ಸಿ.ಕೆ. ಅಚ್ಚುಕಟ್ಟು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ತನಿಖೆ ಆರಂಭಿಸಿದ್ದಾರೆ.

# ಮಹದೇವಪುರದಲ್ಲಿ ಕಿಲಾಡಿ ಮನೆಗಳ್ಳ ಬಂಧನ; ₹29.40 ಲಕ್ಷ ಮೌಲ್ಯದ ಚಿನ್ನಾಭರಣ ವಶ



**ಬೆಂಗಳೂರು:** ಹಗಲು ಹೊತ್ತಲ್ಲೇ ಮನೆ ಬೀಗ ಮುರಿದು ಚಿನ್ನಾಭರಣ ಕಳ್ಳತನ ಮಾಡುತ್ತಿದ್ದ ಕಿಲಾಡಿ ಕಳ್ಳನನ್ನು ಮಹದೇವಪುರ ಪೊಲೀಸರು ನಿಖರ ಗೌಪ್ಯ ಕಾರ್ಯಾಚರಣೆಯಲ್ಲಿ ಬಂಧಿಸಿದ್ದಾರೆ. ಮೊಹಮದ್ ತಂಜೀಮ್ (33) ಎಂದು ಗುರುತಿಸಲ್ಪಟ್ಟ ಆರೋಪಿ ಡ್ರೈ ಫ್ರೂಟ್ಸ್ ವ್ಯಾಪಾರ ಮಾಡಿಕೊಂಡು, ಜೊತೆಗೆ ಮನೆಗಳ್ಳತನಗಳನ್ನು ಸರಣಿ ರೀತಿಯಲ್ಲಿ ನಡೆಸುತ್ತಿದ್ದಾನೆಂದು ಪೊಲೀಸರು ತಿಳಿಸಿದ್ದಾರೆ.

ಮೈಸೂರು ಮೂಲದ ಈ ಆರೋಪಿ ಅಲ್ಲಿ ಹಲವಾರು ಕಳ್ಳತನ ಪ್ರಕರಣಗಳಲ್ಲಿ ತೊಡಗಿಕೊಂಡಿದ್ದ ಬಳಿಕ ಬೆಂಗಳೂರಿಗೆ ಬಂದು ಮಹದೇವಪುರ ಠಾಣಾ ವ್ಯಾಪ್ತಿಯಲ್ಲಿ ತನ್ನ ಕೈಚಳಕವನ್ನು ಮುಂದುವರಿಸಿದ್ದಾನೆ. ಹಗಲಿನ ವೇಳೆ ಮನೆಗಳಲ್ಲಿ ಯಾರೂ ಇರದ ಸಮಯಗಳನ್ನು ಗುರಿಯಾಗಿಸಿಕೊಂಡು, ಬೀಗಗಳನ್ನು ಮುರಿದು ಒಳನುಗ್ಗಿ ಅಮೂಲ್ಯ ಚಿನ್ನಾಭರಣ ಕದ್ದುಕೊಂಡಿದ್ದಾನೆ ಎಂಬುದು ತನಿಖೆಯಿಂದ ಬೆಳಕಿಗೆ ಬಂದಿದೆ.

ಸಿಸಿಟಿವಿ ದೃಶ್ಯಗಳಲ್ಲಿ ಮನೆಗಳ್ಳನ ಚಲನವಲನಗಳು ಸ್ಪಷ್ಟವಾಗಿ ದಾಖಲಾಗಿದ್ದು, ಅದೇ ಆಧಾರದಲ್ಲಿ ಪೊಲೀಸರು ಆರೋಪಿಯನ್ನು ಪತ್ತೆಹಚ್ಚಿದರು. ಬಂಧಿತನಿಂದ 29.40 ಲಕ್ಷ ಮೌಲ್ಯದ 245 ಗ್ರಾಂ ಚಿನ್ನಾಭರಣ ಮತ್ತು ಒಂದು ಬೈಕ್ ವಶಕ್ಕೆ ಪಡೆಯಲಾಗಿದೆ.

# ರಾಜ್ಯದಲ್ಲಿ ಹಬ್ಬಿದ್ದ ನಕಲಿ ಲೈಂಗಿಕ ಔಷಧಿ ಜಾಲ



**ಬೆಂಗಳೂರು:** ಟೆಕ್ಕಿ ತೇಜಸ್ ಎಂಬವರನ್ನು ಲೈಂಗಿಕ ಸಮಸ್ಯೆಗೆ ಪರಿಹಾರ ನೀಡುವ ನೆಪದಲ್ಲಿ ಮೋಸಮಾಡಿ 48 ಲಕ್ಷ ರೂ. ವಂಚಿಸಿದ ವಿಜಯ್ ಗುರೂಜಿಯನ್ನು ಕೆಲ ದಿನಗಳ ಹಿಂದೆಯಷ್ಟೆ ಪೊಲೀಸರು ಬಂಧಿಸಿದ್ದರು. ಇದೀಗ ಗುರೂಜಿಯ ಸಹಚರನನ್ನೂ ಸಹ ಜ್ಞಾನ ಭಾರತಿ ಪೊಲೀಸರು ಅರೆಸ್ಟ್ ಮಾಡಿದ್ದು, ಇಬ್ಬರನ್ನೂ ಪರಪ್ಪನ ಅಗ್ರಹಾರಕ್ಕೆ ಕಳುಹಿಸಲಾಗಿದೆ. ವಿಜಯ್ ಗುರೂಜಿ ಮತ್ತು ಆತನ ಸಹಚರರಿಂದ ಮೋಸ ಹೋದ ಟೆಕ್ಕಿ ತೇಜಸ್, ತೀವ್ರ ಅನಾರೋಗ್ಯ ಸಮಸ್ಯೆ ಎದುರಾದಾಗ ಪೊಲೀಸರಲ್ಲಿ ದೂರು ನೀಡಿದ್ದರು. ಅವರ ದೂರಿನ ಮೇರೆಗೆ ತೆಲಂಗಾಣ ಮೊಹಬೂಬ್ ನಗರದಲ್ಲಿ ವಿಜಯ್ ಗುರೂಜಿಯನ್ನು ಬಂಧಿಸಲಾಗಿತ್ತು.

ಇದೀಗ ಆತನ ಸಹಚರ ಮನೋಜ್ ಸಿಂಗ್ ಚಿತ್ತೋಡಿಯಾನನ್ನು ತೆಲಂಗಾಣದ ಸೈಬರಬಾದ್‌ನಲ್ಲಿ ಸೆರೆಹಿಡಿಯಲಾಗಿದೆ. ಐಷಾರಾಮಿ ಜೀವನ ಸಾಗಿಸುತ್ತಿದ್ದ ಆರೋಪಿಗಳು, ಬೆಂಗಳೂರು, ತುಮಕೂರು ಸೇರಿ ಒಟ್ಟು ಎಂಟು ಟೆಂಟ್ ಗಳನ್ನು ಹೊಂದಿದ್ದರೆಂದು ತಿಳಿದು ಬಂದಿದೆ. ಆರೋಪಿಗಳಿಗೆ ಟೆಕ್ಕಿ ನೀಡಿದ್ದ 40 ಲಕ್ಷದಲ್ಲಿ 19.50 ಲಕ್ಷ ಹಣವನ್ನು ವಶಕ್ಕೆ ಪಡೆದ ಪೊಲೀಸರು, ಒಂದು ಟಿ.ಟಿ ವಾಹನವನ್ನೂ ವಶಪಡಿಸಿಕೊಂಡಿದ್ದಾರೆ. ಇಬ್ಬರು ಆರೋಪಿಗಳನ್ನು ಪರಪ್ಪನ ಅಗ್ರಹಾರಕ್ಕೆ ಕಳಿಸಲಾಗಿದೆ.

ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಪ್ರತಿಕ್ರಿಯೆ

ಈ ಪ್ರಕರಣದ ಕುರಿತು ಮಾತನಾಡಿರುವ ಬೆಂಗಳೂರು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್, ನಕಲಿ ಗುರೂಜಿ ವಿಜಯ್ ಚಿತ್ತೋಡಿಯಾನನ್ನು ಬಂಧಿಸಲಾಗಿದೆ. ಈ ಬಗ್ಗೆ ಸಾರ್ವಜನಿಕರು ಅರಿವು ಪಡೆದುಕೊಳ್ಳಬೇಕಾಗುತ್ತದೆ. ಸದ್ಯ ನಾವು ಆರೋಪಿಗಳನ್ನು ಬಂಧಿಸಿ ಹಣ ವಶಕ್ಕೆ ಪಡೆದಿದ್ದೇವೆ. ಯಾರಿಗೆ ಸಮಸ್ಯೆ ಇದೆಯೋ ಅವರು ಅಧಿಕೃತ ಆಸ್ಪತ್ರೆಗೆ ಭೇಟಿ ನೀಡಿ.

ಈ ರೀತಿ ಟೆಂಟ್‌ನಲ್ಲಿ ಇದ್ದವರ ಕಡೆ ಹೋದರೆ ಸಮಸ್ಯೆ ಆಗುತ್ತದೆ. ಈ ರೀತಿ ಕೆಲಸ ಮಾಡುತ್ತಿದ್ದವರ ವಿರುದ್ಧ ದೂರು ಬಂದರೆ ಕ್ರಮ ಕೈಗೊಳ್ಳುತ್ತೇವೆ. ಬೆಂಗಳೂರಿನಲ್ಲಿ ಟೆಂಟ್‌ನಲ್ಲಿ ಚಿಕಿತ್ಸೆ ನೀಡುವವರ ದಾಖಲಾತಿ ಪರಿಶೀಲಿಸಲಾಗುತ್ತದೆ.ಈ ಪ್ರಕರಣದಲ್ಲಿ ಚಿಕಿತ್ಸೆ ಪಡೆದಿದ್ದ ದೂರುದಾರನಿಗೆ ಆರೋಗ್ಯ ಸಮಸ್ಯೆ ಉಂಟಾಗಿದೆ. ಆತನ ಜೀವಕ್ಕೂ ಅಪಾಯ ಉಂಟಾಗಬಹುದು. ಹೀಗಾಗಿ ಟೆಂಟ್‌ನಲ್ಲಿರುವ ವ್ಯಕ್ತಿಗಳ ಬಳಿ ಯಾರೂ ಚಿಕಿತ್ಸೆ ಪಡೆಯಬೇಡಿ ಎಂದಿದ್ದಾರೆ.

# ಮನೆಗೆ ಬೆಂಕಿ ತಗುಲಿ ಭಾರತೀಯ ಯುವತಿ ಸಜೀವ ದಹನ



**ಅಮೆರಿಕ:** ನ್ಯೂಯಾರ್ಕ್‌ನ ಆಲ್ಬನಿ ನಗರದಲ್ಲಿ ನಡೆದ ಒಂದು ಭೀಕರ ಅಗ್ನಿ ದುರಂತದಲ್ಲಿ ಗಂಭೀ ರವಾಗಿ ಗಾಯಗೊಂಡಿದ್ದ 24 ವರ್ಷದ ಭಾ ರತೀಯ ವಿದ್ಯಾರ್ಥಿನಿಯೊಬ್ಬರು ಚಿಕಿತ್ಸೆ ಫಲಕಾರಿಯಾಗದೆ ಸಾವನ್ನಪ್ಪಿದ್ದಾರೆ.

ಮೃತರನ್ನು ಸಹಜಾ ರೆಡ್ಡಿ ಉದುಮಲ ಎಂದು ಗುರುತಿಸಲಾಗಿದೆ. ಅವರು ಆಲ್ಬನಿ ನಗರದಲ್ಲಿ ಸ್ನಾತಕೋತ್ತರ ಪದವಿಯನ್ನು ವ್ಯಾಸಂಗ ಮಾಡುತ್ತಿದ್ದರು. ಸಹಜಾ ಅವರು ತೀವ್ರವಾಗಿ ಗಾಯಗೊಂಡಿದ್ದು, ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾಗ ಮೃತಪಟ್ಟಿದ್ದಾರೆ ಎಂದು ನ್ಯೂಯಾರ್ಕ್‌ನಲ್ಲಿರುವ ಭಾರತೀಯ ಮಿಷನ್ ಖಚಿತಪಡಿಸಿದೆ.

ನ್ಯೂಯಾರ್ಕ್‌ನಲ್ಲಿರುವ ಭಾರತದ ಕಾನ್ಸುಲೇಟ್ ಜನರಲ್ ಕಚೇರಿಯು 'X' ಮೂಲಕ ಈ ದುರ್ಘಟನೆಗೆ ತೀವ್ರ ಸಂತಾಪ ವ್ಯಕ್ತಪಡಿಸಿದೆ. ಆಲ್ಬನಿಯಲ್ಲಿ ಸಂಭವಿಸಿದ ಮನೆಯ ಬೆಂಕಿ ಅವಘಡದಲ್ಲಿ ಪ್ರಾಣ ಕಳೆದುಕೊಂಡ ಸಹಜಾ ರೆಡ್ಡಿ ಉದುಮಲ ಅವರ ಅಕಾಲಿಕ ನಿಧನದಿಂದ ತೀವ್ರ ದುಃಖಿತರಾಗಿದ್ದೇವೆ ಎಂದು ಕಾನ್ಸುಲೇಟ್ ಹೇಳಿದೆ. ಈ ಸಮಯದಲ್ಲಿ ಸಹಜಾ ಅವರ ಕುಟುಂಬಕ್ಕೆ ಸಂತಾಪ ಸೂಚಿಸಿದ ಕಾನ್ಸುಲೇಟ್, ಈ ದುರಂತದ ನಂತರ ಉದುಮಲ ಅವರ ಕುಟುಂಬದೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ಮೃತದೇಹವನ್ನು ಭಾರತಕ್ಕೆ ಸ್ಥಳಾಂತರಿಸುವುದು ಸೇರಿದಂತೆ ಸಾಧ್ಯವಿರುವ ಎಲ್ಲ ಸಹಾಯ ಮತ್ತು ಬೆಂಬಲವನ್ನು ಒದಗಿಸುತ್ತೇವೆ ಎಂದು ಮಾಹಿತಿ ನೀಡಿದೆ.

ಈ ಭೀಕರ ಅಗ್ನಿ ದುರಂತವು ಡಿಸೆಂಬರ್ 4 ರ ಬೆಳಿಗ್ಗೆ ಆಲ್ಬನಿಯ ವಸತಿ ಪ್ರದೇಶದಲ್ಲಿ ಸಂಭವಿಸಿದೆ. ಅಲ್ಬನಿ ಪೊಲೀಸ್ ಇಲಾಖೆ ಮತ್ತು ಅಲ್ಬನಿ ಅಗ್ನಿಶಾಮಕ ದಳದವರು ಬೆಂಕಿಯ ಕುರಿತು ಮಾಹಿತಿ ಪಡೆದು ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ.

ಘಟನಾ ಸ್ಥಳಕ್ಕೆ ಆಗಮಿಸಿದಾಗ ಅಧಿಕಾರಿಗಳು ಮತ್ತು ಅಗ್ನಿಶಾಮಕ ದಳದವರು, ಆ ವಸತಿ ಮನೆ ಸಂಪೂರ್ಣವಾಗಿ ಬೆಂಕಿಯ ಜ್ವಾಲೆಯಲ್ಲಿ ಮುಳುಗಿರುವುದನ್ನು, ಮನೆಯೊಳಗೆ ಇನ್ನೂ ಹಲವಾರು ವ್ಯಕ್ತಿಗಳು ಸಿಲುಕಿಕೊಂಡಿದ್ದಾರೆ ಎಂಬ ಮಾಹಿತಿ ದೊರೆತ ಹಿನ್ನೆಲೆಯಲ್ಲಿ, ರಕ್ಷಣಾ ಕಾರ್ಯಾಚರಣೆಯನ್ನು ತಕ್ಷಣವೇ ಪ್ರಾರಂಭಿಸಲಾಯಿತು.

ಅಗ್ನಿಶಾಮಕ ದಳದವರು ಸಮಯಕ್ಕೆ ಸರಿಯಾಗಿ ಕಾರ್ಯನಿರ್ವಹಿಸಿ, ಮನೆಯೊಳಗೆ ಸಿಲುಕಿದ್ದ ನಾಲ್ಕು ಜನರನ್ನು ಪತ್ತೆಹಚ್ಚಿ ಹೊರತರಲು ಯಶಸ್ವಿಯಾದರು. ಈ ನಾಲ್ವರೂ ಗಂಭೀರವಾಗಿ ಗಾಯಗೊಂಡಿದ್ದರು. ತುರ್ತು ವೈದ್ಯಕೀಯ ಸಿಬ್ಬಂದಿ (EMS) ಸ್ಥಳದಲ್ಲೇ ಅವರಿಗೆ ಪ್ರಾಥಮಿಕ ಚಿಕಿತ್ಸೆ ನೀಡಿ, ತಕ್ಷಣವೇ ಅವರನ್ನು ಆಸ್ಪತ್ರೆಗೆ ದಾಖಲಿಸಿದ್ದಾರೆ.

ಪ್ರಾಥಮಿಕ ಚಿಕಿತ್ಸೆಯ ನಂತರ, ಗಾಯಗೊಂಡವರಲ್ಲಿ ಇಬ್ಬರನ್ನು ಹೆಚ್ಚಿನ ಮತ್ತು ವಿಶೇಷ ಚಿಕಿತ್ಸೆಗಾಗಿ ಸ್ಥಳೀಯ ವೈದ್ಯಕೀಯ ಕೇಂದ್ರದಿಂದ ಮತ್ತೊಂದು ವಿಶೇಷ ವೈದ್ಯಕೀಯ ಕೇಂದ್ರಕ್ಕೆ ವರ್ಗಾಯಿಸಲಾಯಿತು. ದುರಂತವೆಂದರೆ, ಈ ನಾಲ್ಕು ಸಂತ್ರಸ್ತರಲ್ಲೊಬ್ಬರಾದ ಭಾರತೀಯ ವಿದ್ಯಾರ್ಥಿನಿ ಸಹಜಾ ರೆಡ್ಡಿ ಉದುಮಲ ಅವರು, ತೀವ್ರವಾದ ಗಾಯಗಳಿಂದಾಗಿ ಚಿಕಿತ್ಸೆಗೆ ಸ್ಪಂದಿಸದೆ ಸಾವನ್ನಪ್ಪಿದರು ಎಂದು ಪೊಲೀಸ್ ಇಲಾಖೆಯ ವಕ್ತಾರರು ತಿಳಿಸಿದರು.

# ಜೈಲಿನಲ್ಲಿ ಮತ್ತೆ ಕೈದಿಗಳ ದಾಂಧಲೆ; ಟಿವಿ ಸೇರಿ ಹಲವು ವಸ್ತುಗಳ ಧ್ವಂಸ

**ಕಾರವಾರ:** ಇಲ್ಲಿನ ಜೈಲಿನಲ್ಲಿ ಮತ್ತೆ ಕೈದಿಗಳು ದಾಂಧಲೆ ಸೃಷ್ಟಿಸಿದ್ದಾರೆ. ಜೈಲಿನಲ್ಲಿದ್ದ ಟಿ.ವಿ ಸೇರಿದಂತೆ ಹಲವು ವಸ್ತುಗಳನ್ನು ಧ್ವಂಸಗೊಳಿಸಿದ್ದಾರೆ. ಮಂಗಳೂರಿನ ಆರು ಆರೋಪಿಗಳಿಂದ ಜೈಲಿನಲ್ಲಿ ಗಲಾಟೆಯಾಗಿದೆ. ವಸ್ತುಗಳನ್ನೆಲ್ಲ ಪುಡಿಗಟ್ಟಿದ್ದಾರೆ. ಕಾರವಾರ ನಗರ ಠಾಣೆ ಪೊಲೀಸರ ತಂಡ ಜೈಲಿಗೆ ದೌಡಾಯಿಸಿ ಪರಿಶೀಲನೆ ನಡೆಸಿದೆ. ಮೊನ್ನೆಯಷ್ಟೇ ಜೈಲಿನಲ್ಲಿ ಮಾದಕ ವಸ್ತುಗಳ ಬಳಕೆಗೆ ಬ್ರೇಕ್ ಹಾಕಲು ಬಿಗಿ ಬಂದೋಬಸ್ತ್ ಮಾಡಲಾಗಿತ್ತು. ಈ ಹಿನ್ನೆಲೆಯಲ್ಲಿ ಜೈಲರ್ ಸೇರಿದಂತೆ ಮೂವರು ಸಿಬ್ಬಂದಿ ಮೇಲೆ ಆರೋಪಿಗಳು ಮಾರಣಾಂತಿಕ ಹಲ್ಲೆ ನಡೆಸಿದ್ದರು ಮಂಗಳೂರು ಮೂಲದ ಮೊಹ್ಮದ್ ಅಬ್ದುಲ್ ಫಯಾನ್, ಕೌಶಿಕ ನಿಹಾಲ್ ಹಲ್ಲೆ ಮಾಡಿದ್ದರು. ಜೈಲರ್ ಕಲ್ಲಪ್ಪ ಗಸ್ತಿ ಸೇರಿದಂತೆ ಮೂವರು ಸಿಬ್ಬಂದಿ ಮೇಲೆ ಹಲ್ಲೆ ಮಾಡಲಾಗಿತ್ತು. ಡಕಾಯಿತಿ ಸೇರಿದಂತೆ 12ಕ್ಕೂ ಹೆಚ್ಚು ಪ್ರಕರಣಗಳಲ್ಲಿ ಈ ರೌಡಿಗಳು ಆರೋಪಿಗಳಾಗಿದ್ದಾರೆ. ಮಂಗಳೂರು ಜೈಲಿನಲ್ಲಿ ಹೆಚ್ಚುವರಿಯಾಗಿದ್ದ ಆರು ಆರೋಪಿಗಳನ್ನ ಕಾರವಾರಕ್ಕೆ ಶಿಫ್ಟ್ ಮಾಡಲಾಗಿತ್ತು. ಮೊನ್ನೆ ಹಲ್ಲೆ ಘಟನೆ ಬೆನ್ನಲ್ಲೇ ಇಂದು ಉಳಿದ ಸಹಚರರಿಂದ ಜೈಲಿನಲ್ಲಿ ದಾಂಧಲೆ ನಡೆದಿದೆ. ಕಾರವಾರ ಡಿವೈಎಸ್‌ಪಿ ಗಿರೀಶ್ ಜೈಲಿನಲ್ಲಿ ಮೊಕ್ಕಾಂ ಹೂಡಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಕುಡುಕರು ಹೆಚ್ಚಾಗಿದ್ದು ಯಾವ ಸರ್ಕಾರದ ಅವಧಿಯಲ್ಲಿ :ಬಿಜೆಪಿ-ಕಾಂಗ್ರೆಸ್ ನಡುವೆ ವಾಗ್ವಾದ



**ಬೆಂಗಳೂರು:** ಕುಡುಕರು ಜಾಸ್ತಿಯಾಗಿದ್ದು ಬಿಜೆಪಿ ಆಡಳಿತದಲ್ಲೋ ಅಥವಾ ಕಾಂಗ್ರೆಸ್ ಕಾಲದಲ್ಲೋ?—ಈ ಪ್ರಶ್ನೆಯೇ ಕರ್ನಾಟಕ ವಿಧಾನಸಭೆಯಲ್ಲಿ ಮಂಗಳವಾರ ಬಿಸಿ ಬಿಸಿ ಚರ್ಚೆಗೆ ಕಾರಣವಾಯಿತು.

ವಿಪಕ್ಷ ನಾಯಕ ಆರ್. ಅಶೋಕ್ ಅವರು ಸದನದಲ್ಲಿ ಈ ವಿಚಾರ ಪ್ರಸ್ತಾಪಿಸಿ ಸರ್ಕಾರದ ವಿರುದ್ಧ ಕಿಡಿಕಾರಿದರು.. ಸಿದ್ದರಾಮಯ್ಯ ಸರ್ಕಾರದ ಗೃಹಲಕ್ಷ್ಮಿ ಯೋಜನೆಯನ್ನು ಗುರಿಯಾಗಿ ಸಿಕೊಂಡ ಅವರು, "ಮುಖ್ಯಮಂತ್ರಿಯವರ ಬಾಡಿ ಲ್ಯಾಂಗ್ವೇಜ್ ಬದಲಾಗಿದೆ. ಭಾಷಣದ ವೇಳೆ ಜನರು ಏನನ್ನೇ ಕೇಳಿದರೂ 'ಎರಡು ಸಾವಿರ ಕೊಡ್ತಿದೀನಿ' ಅನ್ನೋ ಉತ್ತರ. ಆದರೆ ಆ ಎರಡು ಸಾವಿರ ರೂಪಾಯಿ ಎಲ್ಲಿ ಬರುತ್ತಿದೆ? ಗಂಡನ ಜೇಬಿನಿಂದ! ಮದ್ಯ ಖರೀದಿಗೆ ಹೋಗುತ್ತಿದ್ದ ಹಣಕ್ಕೆ ಈಗ ತೆರಿಗೆ ಹಾಕಿ ಮಹಿಳೆಯರಿಗೆ ಕೊಡ್ತಿದ್ದೀರಿ," ಎಂದು ಕಟುವಾಗಿ ಟೀಕಿಸಿದರು.

"ಒಂದು ಕ್ವಾಟರ್‌ಗೆ 50-60 ರೂಪಾಯಿ ಹೆಚ್ಚಿಸಿದ್ದಾರೆ. ಗಂಡನ ಹಣ ಕಿತ್ತುಕೊಂಡು ಹೆಂಡತಿಗೆ ಕೊಡ್ತಿರುವ ಸರ್ಕಾರಿ ಯೋಜನೆ ಇದು!" ಎಂದು ಆರ್. ಅಶೋಕ್ ಆರೋಪಿಸಿದರು. ಶಿವಲಿಂಗೇಗೌಡ ತಕ್ಷಣವೇ ಮಧ್ಯಪ್ರವೇಶಿಸಿ, "ಬಿಜೆಪಿ ಆಡಳಿತದ ಅವಧಿಯಲ್ಲಿ ಜನರು ಕುಡಿಯುತ್ತಿರ ಲಿಲ್ಲವೇ? ಯಾವ ಕಾಲದಲ್ಲೂ ಜನರು ಕುಡಿದಿದ್ದಾರೆ. ಇದನ್ನು ರಾಜಕೀಯ ಬಣ್ಣಕ್ಕೆ ಹಚ್ಚುವುದು ಸರಿಯಲ್ಲ," ಎಂದು ತಿರುಗೇಟು ನೀಡಿದರು.

ಅದೇ ವೇಳೆ ಸಚಿವ ಎಚ್.ಕೆ. ಪಾಟೀಲ್ ಅವರು ಅಶೋಕ್ ಅವರ ಮಾತುಗಳನ್ನು ವಿರೋಧಿಸಿ, "ನಿಮ್ಮ ಮಾತಿನ ಸ್ವರವನ್ನೇ ನೋಡುವಾಗ ಕುಡಿಯುವವರು ಉತ್ತರ ಕರ್ನಾಟಕದಲ್ಲೇ ಹೆಚ್ಚು ಎಂಬಂತೆ ಕಾಣುತ್ತದೆ. ಗೃಹಲಕ್ಷ್ಮಿ ಹಣ ಮದ್ಯ ಖರೀದಿಗೆ ಹೋಗುತ್ತಿದೆ ಎನ್ನುವುದು ತಪ್ಪು. ಈ ಯೋಜನೆ ಬಡತನ ನಿವಾರಣೆಗೆ, ಮಹಿಳಾ ಸಬಲೀಕರಣಕ್ಕೆ ಸಹಾಯಕವಾಗಿದೆ," ಎಂದು ಅವರು ಹೇಳಿದರು.

ಇದೇ ವೇಳೆ ಶಾಸಕ ಬಸವರಾಜ ರಾಯರೆಡ್ಡಿ ಮಾತನಾಡಿದ ಅವರು, ಬೆಂಗಳೂರು ನಗರದಲ್ಲಿ ಮದ್ಯಪಾನದ ಪ್ರಮಾಣ ಹೆಚ್ಚಾಗಿದೆ ಎಂದು ಅಂಕಿಅಂಶಗಳನ್ನು ಉಲ್ಲೇಖಿಸಿ ಹೇಳಿದರು.

"ಬೆಂಗಳೂರು ನಗರದಲ್ಲಿ ಕುಡಿಯುವವರ ಸಂಖ್ಯೆ ಕಳೆದ ವರ್ಷಕ್ಕೆ ಹೋಲಿಸಿದರೆ ಏರಿಕೆಯಾಗಿದೆ. ಅದೇ ವೇಳೆ ಉತ್ತರ ಕರ್ನಾಟಕ ಭಾಗದಲ್ಲಿ ಕುಡಿಯುವವರ ಸಂಖ್ಯೆ ಕಡಿಮೆಯಾಗಿದೆ. ಆದರೆ ಅಶೋಕ ಅವರ ಕ್ಷೇತ್ರದಲ್ಲೇ ಮದ್ಯಪಾನಿಗಳ ಸಂಖ್ಯೆ 1.6% ಹೆಚ್ಚಾಗಿದೆ," ಎಂದು ರಾಯರೆಡ್ಡಿ ಪ್ರತಿದಾಳಿ ನಡೆಸಿದರು.

"ನಾನು ಉತ್ತರ ಕರ್ನಾಟಕದ ಜನರು ಕುಡಿಯುತ್ತಾರೆ ಎಂದು ಹೇಳಿಲ್ಲ. ಆದರೆ ಮದ್ಯಕ್ಕೆ ತೆರಿಗೆ ಹೆಚ್ಚಿಸಿರುವುದು ಒಂದರ್ಥದಲ್ಲಿ 'ತೆರಿಗೆ ಭಯೋತ್ಪಾದನೆ'. ಜನರ ಜೇಬಿಗೆ ಹೊರೆ ಹಾಕಿ ಸರ್ಕಾರ ಲಾಭ ನೋಡಿಕೊಳ್ಳುತ್ತಿದೆ," ಎಂದು ಸರ್ಕಾರದ ತೆರಿಗೆ ನೀತಿಯನ್ನು ಟೀಕಿಸಿದರು.

ಬಿಜೆಪಿ-ಕಾಂಗ್ರೆಸ್ ಎರಡೂ ಕಡೆಗಳಿಂದಲೂ ಬಂದ ಮಾತುಗಳಿಗೆ ಸದನ ಕ್ಷಣಕ್ಷಣಕ್ಕೂ ಉದ್ವಿಗ್ನತೆಯಿಂದ ಕೂಡಿತ್ತು. ಮದ್ಯಪಾನದ ಬಳಕೆ ಯಾವ ಸರ್ಕಾರದ ಅವಧಿಯಲ್ಲಿ ಹೆಚ್ಚಾಗಿದೆ ಎಂಬ ಪ್ರಶ್ನೆ, ಅಭಿವೃದ್ಧಿ-ಬಡತನ ನಿವಾರಣೆ-ತೆರಿಗೆ ನೀತಿ-ಗೃಹಲಕ್ಷ್ಮಿ ಯೋಜನೆ ಎಂಬ ಬೃಹತ್ ಚರ್ಚೆಗೆ ತಿರುಗಿತು.

# ವಂದೇ ಮಾತರಂ ಗೀತೆ ತುಂಡರಿಸಿದ್ದೇ ದೇಶ ವಿಭಜನೆಗೆ ಕಾರಣ!: ಅಮಿತ್ ಶಾ



**ನವದೆಹಲಿ**: ವಂದೇ ಮಾತರಂ ಬಗ್ಗೆ ಚರ್ಚಿಸಲಾಗುತ್ತಿದೆ ಎಂದು ಕೆಲವರು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು. ಆದರೆ, ಅವರು ವಂದೇ ಮಾತರಂನ ವೈಭವವನ್ನು ಚುನಾವಣೆ ಜೊತೆಗೆ ತಳುಕು ಹಾಕುವ ಮೂಲಕ ಕುಗ್ಗಿಸುವ ಕೆಲಸ ಮಾಡುತ್ತಿದ್ದಾರೆ' ಎಂದು ಕಾಂಗ್ರೆಸ್ ಸರ್ಕಾರದ ವಿರುದ್ಧ ರಾಜ್ಯಸಭೆಯಲ್ಲಿ ಗೃಹ ಸಚಿವ ಅಮಿತ್ ಶಾ ವಾಗ್ದಾಳಿ ನಡೆಸಿದರು. ಚರ್ಚೆಯಲ್ಲಿ ಮಾತನಾಡಿದ ಅಮಿತ್ ಶಾ, ವಂದೇ ಮಾತರಂ ಗೀತೆಯ ಮೂಲ ಭಾವ, ಇತಿಹಾಸ ಮತ್ತು ಅದರಲ್ಲಿ ಅಡಕವಾಗಿರುವ ದೇಶಭಕ್ತಿಯ ಬಗ್ಗೆ ಉಲ್ಲೇಖಿಸಿದರು. ಬಂಕಿಮ್ ಚಂದ್ರ ಚಟರ್ಜಿ ಬರೆದಿದ್ದರೂ, ಗೀತೆ ಪಶ್ಚಿಮ ಬಂಗಾಳಕ್ಕೆ ಮಾತ್ರ ಸೀಮಿತವಲ್ಲ; ವಿಶ್ವದ ಯಾವುದೇ ಮೂಲೆಯಲ್ಲಿದ್ದ ಭಾರತೀಯ ಸ್ವಾತಂತ್ರ್ಯ ಹೋರಾಟಗಾರರಿಗೆ ಇದು ಸ್ಫೂರ್ತಿ ಮೂಲ ಎಂದು ಅವರು ಹೇಳಿದರು.

" ವಂ ದೇ ಮಾತರಂ 50ನೇ ವರ್ಷಾಚರಣೆಯ ವೇಳೆ ಜವಾಹರಲಾಲ್ ನೆಹರು ಗೀತೆಯನ್ನು ಇಬ್ಭಾಗ ಮಾಡಿ ಕೇವಲ ಎರಡು ಚರಣಗಳಷ್ಟೇ ಹಾಡುವಂತೆ ಮಿತಿಗೊಳಿಸಿದರು. ಇದೇ ತುಷ್ಟಿಕರಣ ರಾಜಕೀಯದ ಆರಂಭ. ವಂದೇ ಮಾತರಂ ಅನ್ನು ವಿಭಜಿಸದಿದ್ದರೆ ದೇಶವೂ ವಿಭಜನೆಯಾ ಗುತ್ತಿರಲಿಲ್ಲ ಎಂಬುದು ನನ್ನ ನಂಬಿಕೆ." ಎಂದು ಅಮಿತ್ ಶಾ ಆರೋಪಿಸಿದರು. ಅಮಿತ್ ಶಾ ಹೇಳಿಕೆಗೆ ತಕ್ಷಣವೇ ಪ್ರತಿಕ್ರಿಯಿಸಿದ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ್ ಖರ್ಗೆ, ವಂದೇ ಮಾತರಂ ಗೀತೆಯನ್ನು ರಾಷ್ಟ್ರದ ಕಾರ್ಯಕ್ರಮಗಳಲ್ಲಿ ಹಾಡುವ ಪರಂಪರೆಯನ್ನು ಕಾಂಗ್ರೆಸ್ ಹುಟ್ಟುಹಾಕಿದೆ ಎಂದು ನೆನಪಿಸಿದರು. "ವಂದೇ ಮಾತರಂ ಎಂದೇ ನನ್ನ ಭಾ ಷ ಣ ಆರಂಭಿಸುತ್ತೇನೆ.

ಈ ಗೀತೆಯನ್ನು ರಾಷ್ಟ್ರಘೋ ಷಣೆಯ ಮಟ್ಟಕ್ಕೆ ತೆಗೆದು ತಂದದ್ದು ಕಾಂಗ್ರೆಸ್. 1937ರಲ್ಲಿ ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸರ್ವಾನುಮತದಲ್ಲಿ ಕೇವಲ ಎರಡು ಚರಣಗಳನ್ನು ಹಾಡುವಂತೆ ನಿರ್ಧರಿಸಿತ್ತು. ನೆಹರು ಒಬ್ಬರೇ ಇದು ಮಾಡಿದರೆಂದು ಹೇಳುವುದು ಇತಿಹಾಸದ ತಿರುಚು," ಎಂದು ಖರ್ಗೆ ಗರಂ ಆದರು.

ಇನ್ನು, ಬಿಜೆಪಿ ಪ್ರತಿಪಕ್ಷದ ಮೇಲೆ 'ಮುಸ್ಲಿಂ ತುಷ್ಟಿಕರಣ' ಆರೋಪ ಮಾಡುತ್ತಿರುವ ಸಂದರ್ಭದಲ್ಲಿ, ತಮ್ಮದೇ ಇತಿಹಾಸ ಬಿಚ್ಚಿಡಬೇಕು ಎಂದು ಖರ್ಗೆ ಕಟುವಾಗಿ ಹೇಳಿದರು. "ಬಂಗಾಳದಲ್ಲಿ ಮುಸ್ಲಿಂ ಲೀಗ್ ಜೊತೆ ಕೈಜೋಡಿಸಿ ಸರ್ಕಾರ ಮಾಡಿದವರು ಯಾರು? ಜನರ ಸಮಸ್ಯೆಗಳನ್ನು ಚರ್ಚಿಸುವುದೇ ಭಾರತ್ ಮಾತಾ ಗೆ ಗೌರವ. ಸಂಸತ್ತನ್ನು ಬೇರೆ ದಿಕ್ಕಿಗೆಳೆದರೆ ಅದು ದೇಶಭಕ್ತಿ ಅಲ್ಲ," ಎಂದು ಪ್ರತಿಕ್ರಿಯಿಸಿದರು.

ಈ ಚರ್ಚೆಗೆ ಸಂಬಂಧಿಸಿದಂತೆ ಸಂಸದ ಪ್ರಿಯಾಂಕಾ ಗಾಂಧಿಯವರ ಹೇಳಿಕೆ ವೈರಲ್ ಆಗಿದೆ. "150 ವರ್ಷಗಳಿಂದ ವಂದೇ ಮಾತರಂ ನಮ್ಮ ಹೃದಯದಲ್ಲಿದೆ. 75 ವರ್ಷಗಳಿಂದ ದೇಶ ಸ್ವತಂತ್ರ. ಇದೀಗ ಏಕೆ ಈ ಚರ್ಚೆ? ಸರ್ಕಾರ ಚುನಾವಣಾ ಸುಧಾರಣೆಗಳನ್ನು ಚರ್ಚಿಸಲು ತಪ್ಪಿಸುತ್ತಿದೆ. ಬಂಗಾಳ ಚುನಾವಣೆಗೆ ಮುನ್ನ ಜನರ ಗಮನ ಬೇರಡೆಗೆ ತಿರುಗಿಸುವ ರಾಜಕೀಯ ತಂತ್ರ ಮಾತ್ರ ಇದು," ಎಂದು ಆಕ್ರೋಶ ವ್ಯಕ್ತಪಡಿಸಿದರು.

# ಅಕ್ರಮವಾಗಿ ನೆಲೆಸಿದ್ದ 10 ಬಾಂಗ್ಲಾ ಪ್ರಜೆಗಳಿಗೆ ಕಠಿಣ ಶಿಕ್ಷೆ ವಿಧಿಸಿದ ಕೋರ್ಟ್

**ಉಡುಪಿ**: ಯಾವುದೇ ದಾಖಲೆಗಳನ್ನು ಪಡೆಯದೆ ಭಾರತದಲ್ಲಿ ಅಕ್ರಮವಾಗಿ ನೆಲೆಸಿದ್ದ 10 ಮಂದಿ ಬಾಂಗ್ಲಾದೇಶದ ಪ್ರಜೆಗಳಿಗೆ ಉಡುಪಿಯ ಪ್ರಧಾನ ಹಿರಿಯ ಸಿವಿಲ್ ಮತ್ತು ಸಿಜೆಎಂ ನ್ಯಾಯಾಲಯವು ಮಹತ್ವದ ತೀರ್ಪು ನೀಡಿದೆ. ಈ 10 ಮಂದಿಗೆ ತಲಾ ಎರಡು ವರ್ಷಗಳ ಜೈಲು ಶಿಕ್ಷೆ ಮತ್ತು ₹10,000 ದಂಡವನ್ನು ವಿಧಿಸಿ ನ್ಯಾಯಾಲಯ ಆದೇಶ ಹೊರಡಿಸಿದೆ.


ಈ ಬಾಂಗ್ಲಾ ಪ್ರಜೆಗಳು ತಮ್ಮ ತಾವು ಭಾರತವದರೇ ಎಂದು ಸಾಬೀತುಪಡಿಸಲು ನಕಲಿ ದಾಖಲೆಗಳನ್ನು ಸೃಷ್ಟಿಸಿಕೊಂಡಿದ್ದರು ಎಂಬ ಗಂಭೀರ ಆರೋಪವನ್ನು ನ್ಯಾಯಾಲಯದಲ್ಲಿ ಸಾಬೀತಾಗಿದೆ. ಬಂಧಿತ ಆರೋಪಿಗಳು ಬಾಂಗ್ಲಾದೇಶದಿಂದ ಭಾರತಕ್ಕೆ ಅಕ್ರಮವಾಗಿ ಪ್ರವೇಶಿಸಿದ್ದರು. ಅಷ್ಟೇ ಅಲ್ಲದೆ, ಅವರು ಇಲ್ಲೇ ನೆಲೆಸಿ, ಉದ್ಯೋಗ ಹೊಂದುವ ಉದ್ದೇಶದಿಂದ ನಕಲಿ ಆಧಾರ್ ಕಾರ್ಡ್‌ಗಳನ್ನು ಬಳಸುತ್ತಿದ್ದರು. ಬಳಸುತ್ತಿದ್ದರು ಎಂದು ನ್ಯಾಯಾಲಯಕ್ಕೆ ಸಲ್ಲಿಸಲಾದ ಆರೋಪ ಪಟ್ಟಿಯಲ್ಲಿ ಸ್ಪಷ್ಟಪಡಿಸಲಾಗಿತ್ತು.

ಈ ಅಕ್ರಮ ಪ್ರಜೆಗಳು ಉಡುಪಿ ತಾಲೂಕಿನ ಪಡುತೋನ್ನ ಹೂಡೆ ಗ್ರಾಮಕ್ಕೆ ಬಂದಿದ್ದರು.ಈ ಬಗ್ಗೆ ಮಲ್ಪೆ ಠಾಣೆ ಪೊಲೀಸರು ಗಂಭೀರವಾಗಿ ಪರಿಗಣಿಸಿ ಕಾರ್ಯಾಚರಣೆ ನಡೆಸಿದ್ದರು. ಈ ಅಕ್ರಮ ವಲಸಿಗರ ಬಗ್ಗೆ ಖಚಿತ ಮಾಹಿತಿ ಪಡೆದ ಮಲ್ಪೆ ಠಾಣೆ ಪೊಲೀಸರು, 2024ರ ಅಕ್ಟೋಬರ್ 11ರಂದು ಸಂಜೆ ವೇಳೆ ಕಾರ್ಯಾಚರಣೆ ಆರಂಭಿಸಿದರು. ಈ ಕಾರ್ಯಾಚರಣೆಯಲ್ಲಿ ಮಯ ವಡಬಾಂಡೇಶ್ವರ ಬಸ್ ನಿಲ್ದಾಣದ ಬಳಿ ಪೊಲೀಸರು ಮೊದಲಿಗೆ 7 ಮಂದಿ ಬಾಂಗ್ಲಾ ಪ್ರಜೆಗಳನ್ನು ಬಂಧಿಸುವಲ್ಲಿ ಯಶಸ್ವಿಯಾದರು. ನಂತರ, ಪ್ರಕರಣದ ತನಿಖೆಯನ್ನು ತೀವ್ರಗೊಳಿಸಿದ ಪೊಲೀಸರು, ಈ ಜಾಲದಲ್ಲಿ ಭಾಗಿಯಾಗಿದ್ದ ಮತ್ತು ಹೂಡೆಯಲ್ಲಿ ಅಕ್ರಮವಾಗಿ ನೆಲೆಸಿದ್ದ ಉಳಿದ ಮೂವರನ್ನು ಕೂಡ ಬಂಧಿಸಿದರು. ಒಟ್ಟಾರೆ ಈ ಪ್ರಕರಣದಲ್ಲಿ 10 ಮಂದಿ ಅಕ್ರಮ ವಲಸಿಗರನ್ನ ಪೊಲೀಸರು ಬಂಧಿಸಿದರು.

ನ್ಯಾಯಾಲಯದಿಂದ ಶಿಕ್ಷೆಗೊಳಗಾದ ಬಾಂಗ್ಲಾದೇಶದ ಪ್ರಜೆಗಳೆಂದರೆ, ಹಕೀಮ್ ಅಲಿ, ಇಸ್ಮಾಯಿಲ್, ಕರೀಂ, ಸಲಾಂ, ರಾಜೀಕುಲ್ ಸೇರಿದಂತೆ ಒಟ್ಟು 10 ಮಂದಿ ಈ ಪ್ರಕರಣದಲ್ಲಿ ಅರೆಸ್ಟ್ ಆಗಿದ್ದಾರೆ. ಉಡುಪಿಯ ಪ್ರಧಾನ ಹಿರಿಯ ಸಿವಿಲ್ ಮತ್ತು ಸಿಜೆಎಂ ನ್ಯಾಯಾಲಯವು ಇವರ ಅಪರಾಧವನ್ನು ಗಂಭೀರವಾಗಿ ಪರಿಗಣಿಸಿ, ಕೇವಲ ಅಕ್ರಮ ಪ್ರವೇಶ ಮಾತ್ರವಲ್ಲದೆ, ದೇಶದ ಕಾನೂನುಗಳನ್ನು ದುರುಪಯೋಗಪಡಿಸಿಕೊಳ್ಳಲು ನಕಲಿ ಗುರುತಿನ ಚೀಟಿಗಳನ್ನು ಸೃಷ್ಟಿಸಿರುವುದು ಹೆಚ್ಚಿನ ಶಿಕ್ಷೆಗೆ ಅರ್ಹ ಎಂದು ನ್ಯಾಯಾಲಯ ತಿಳಿಸಿದೆ.

ಈ ಸಂಬಂಧ ಎಲ್ಲಾ 10 ಆರೋಪಿಗಳು ಎರಡು ವರ್ಷಗಳ ಕಠಿಣ ಜೈಲು ಶಿಕ್ಷೆ, ಜೊತೆಗೆ, ತಲಾ 10,000 ರೂಪಾಯಿಗಳ ದಂಡ ವಿಧಿಸಲಾಗಿದೆ. ದಂಡ ಕಟ್ಟಲು ತಪ್ಪಿದಲ್ಲಿ ಹೆಚ್ಚುವರಿ ಶಿಕ್ಷೆಯನ್ನು ಎದುರಿಸಬೇಕಾಗುತ್ತದೆ.

# ಶಿರಡಿ ಸಾಯಿಬಾಬಾನಿಗೆ ಚಿನ್ನದ ಕಿರೀಟ ನೀಡಿದ ನಟಿ ಮಾಲಾಶ್ರೀ




ಸ್ಯಾಂಡಲ್‌ವುಡ್‌ನ ಕನಸಿನ ರಾಣಿ ಮಾಲಾಶ್ರೀ 3 ದಶಕಗಳಿಗೂ ಹೆಚ್ಚು ಕಾಲ ಸೌತ್ ಸಿನಿಮಾ ರಂಗದಲ್ಲಿ ಗುರ್ತಿಸಿಕೊಂಡಿದ್ದಾರೆ. 1989ರಲ್ಲಿ ನಂಜುಂಡಿ ಕಲ್ಯಾಣ ಸಿನಿಮಾ ಮೂಲಕ ಕನ್ನಡ ಚಿತ್ರರಂಗಕ್ಕೆ ಪಾದಾರ್ಪಣೆ ಮಾಡಿದವರು. ಇದಕ್ಕಿಂತಲೂ ಮೊದಲು ತೆಲುಗು ಹಾಗೂ ತಮಿಳು ಭಾಷೆಯಲ್ಲಿ ಸಿನಿಮಾ ಮಾಡಿದ್ದಾರೆ ಮಾಲಾಶ್ರೀ. ಬಾಲನಟಿಯಾಗಿ ತಮಿಳು ಸಿನಿಮಾ ಮೂಲಕ ಚಿತ್ರರಂಗ ಪ್ರವೇಶ ಮಾಡಿದ್ದಾರೆ. ತಮ್ಮ ಮೊದಲ ಕನ್ನಡ ಸಿನಿಮಾ ನಂಜುಂಡಿ ಕಲ್ಯಾಣ ಶುರು ಮಾಡುವ ಮುನ್ನ ಶಿರಡಿ ಸಾಯಿಬಾಬಾ ಆಶೀರ್ವಾದವನ್ನ ಪಡೆದು ಸಿನಿಮಾವನ್ನ ಆರಂಭಿಸಿದ್ದರಂತೆ.

ಮಾಲಾಶ್ರೀ ಒಂದು ಕಾಲದಲ್ಲಿ ಸಖತ್ ಬ್ಯುಸಿಯೆಸ್ಟ್ ನಟಿ. ಸ್ಯಾಂಡಲ್‌ವುಡ್‌ನ ಕನಸಿನ ರಾಣಿ ಮಾಲಾಶ್ರೀ 3 ದಶಕಗಳಿಗೂ ಹೆಚ್ಚು ಕಾಲ ಸೌತ್ ಸಿನಿಮಾ ರಂಗದಲ್ಲಿ ಗುರ್ತಿಸಿಕೊಂಡಿದ್ದಾರೆ. 1989ರಲ್ಲಿ ನಂಜುಂಡಿ ಕಲ್ಯಾಣ ಸಿನಿಮಾ ಮೂಲಕ ಕನ್ನಡ ಚಿತ್ರರಂಗಕ್ಕೆ ಪಾದಾರ್ಪಣೆ ಮಾಡಿದವರು. ಇದಕ್ಕಿಂತಲೂ ಮೊದಲು ತೆಲುಗು ಹಾಗೂ ತಮಿಳು ಭಾಷೆಯಲ್ಲಿ ಸಿನಿಮಾ ಮಾಡಿದ್ದಾರೆ ಮಾಲಾಶ್ರೀ. ಬಾಲನಟಿಯಾಗಿ ತಮಿಳು ಸಿನಿಮಾ ಮೂಲಕ ಚಿತ್ರರಂಗ ಪ್ರವೇಶ ಮಾಡಿದ್ದಾರೆ. ತಮ್ಮ ಮೊದಲ ಕನ್ನಡ ಸಿನಿಮಾ ನಂಜುಂಡಿ ಕಲ್ಯಾಣ ಶುರು ಮಾಡುವ ಮುನ್ನ ಶಿರಡಿ ಸಾಯಿಬಾಬಾ ಆಶೀರ್ವಾದವನ್ನ ಪಡೆದು ಸಿನಿಮಾವನ್ನ ಆರಂಭಿಸಿದ್ದರಂತೆ. ಮಾಲಾಶ್ರೀ ಒಂದು ಕಾಲದಲ್ಲಿ ಸಖತ್ ಬ್ಯುಸಿಯೆಸ್ಟ್ ನಟಿ. ಮಾಲಾಶ್ರೀ ಅವರ ಈ ಸಕ್ಸಸ್ ಹಿಂದೆ ಶಿರಡಿ ಸಾಯಿಬಾಬಾ ಅವರ ಆಶೀರ್ವಾದ ಅಚಲವಾಗಿದೆ.

ಈ ಹಿನ್ನೆಲೆ ತಮ್ಮ ಪುತ್ರಿಯ ಮೊದಲ ಸಿನಿಮಾ ಶುರು ಮಾಡುವಾಗಲೂ ಬಾಬಾ ಆಶೀರ್ವಾದವನ್ನ ಪಡೆದಿದ್ದಾರೆ. ಇದೀಗ ಶಿರಡಿಗೆ ಭೇಟಿಕೊಟ್ಟು ಚಿನ್ನದ ಕಿರೀಟವನ್ನ ನೀಡಿದ್ದಾರೆ. ನಮ್ಮ ಕುಟುಂಬದ ಶಕ್ತಿ ಸಾಯಿಬಾಬಾ ಆಗಿದ್ದಾರೆ. ಹೀಗಾಗಿ, ನಮ್ಮ ಕಡೆಯಿಂದ ಒಂದು ಚಿಕ್ಕ ಉಡುಗೊರೆ ಎಂದಿದ್ದಾರೆ ಮಾಲಾಶ್ರೀ ಮಾಲಾಶ್ರೀ ಅವರ ಈ ಸಕ್ಸಸ್ ಹಿಂದೆ ಶಿರಡಿ ಸಾಯಿಬಾಬಾ ಅವರ ಆಶೀರ್ವಾದ ಅಚಲವಾಗಿದೆ. ಈ ಹಿನ್ನೆಲೆ ತಮ್ಮ ಪುತ್ರಿಯ ಮೊದಲ ಸಿನಿಮಾ ಶುರು ಮಾಡುವಾಗಲೂ ಬಾಬಾ ಆಶೀರ್ವಾದವನ್ನ ಪಡೆದಿದ್ದಾರೆ. ಇದೀಗ ಶಿರಡಿಗೆ ಭೇಟಿಕೊಟ್ಟು ಚಿನ್ನದ ಕಿರೀಟವನ್ನ ನೀಡಿದ್ದಾರೆ. ನಮ್ಮ ಕುಟುಂಬದ ಶಕ್ತಿ ಸಾಯಿಬಾಬಾ ಆಗಿದ್ದಾರೆ. ಹೀಗಾಗಿ, ನಮ್ಮ ಕಡೆಯಿಂದ ಒಂದು ಚಿಕ್ಕ ಉಡುಗೊರೆ ಎಂದಿದ್ದಾರೆ

**ಸುದ್ದಿ ಹಾಗೂ ಜಾಹಿರಾತುಗಳಿಗಾಗಿ ಸಂಪರ್ಕಿಸಿ:**
**9538786812 / 9880655634**

# 'ಕಾರ್ತಿಕ ದೀಪಂ' ಹಚ್ಚುವ ನೆಪದಲ್ಲಿ ಹಿಂದೂ-ಮುಸ್ಲಿಂ ಭಾವೈಕ್ಯತೆ ಧಕ್ಕೆ



**ನವದೆಹಲಿ:** ತಮಿಳುನಾಡಿನ ತಿರುಪಾರಂಕುಂದ್ರಂ ಬೆಟ್ಟದ ಸುತ್ತಮುತ್ತಲಿನ ವಿವಾದ ಈಗ ರಾಷ್ಟ್ರಮಟ್ಟದ ಚರ್ಚೆಯಾಗಿ ಮಾರ್ಪಟ್ಟಿದೆ. ಮದ್ರಾಸ್ ಹೈಕೋರ್ಟ್‌ನ ಮಧುರೈ ಪೀಠದ ನ್ಯಾಯಮೂರ್ತಿ ಜಿ.ಆರ್. ಸ್ವಾಮಿನಾಥನ್ ಅವರ ವಿರುದ್ಧ ಕಾಂಗ್ರೆಸ್ ನೇತೃತ್ವದ ಇಂಡಿಯಾ ಬ್ಲಾಕ್ ಒಕ್ಕೂಟದ ಸುಮಾರು 100ಕ್ಕೂ ಹೆಚ್ಚು ಲೋಕಸಭಾ ಸದಸ್ಯರು ಪದಚ್ಯುತಿ ಆಗ್ರಹಿಸಿ ಸಹಿ ಸಂಗ್ರಹಿಸಿ ಲೋಕಸಭಾಧ್ಯಕ್ಷ ಓಂ ಬಿರ್ಲಾ ಅವರಿಗೆ ಮನವಿ ಸಲ್ಲಿಸಿದ್ದಾರೆ. ಇದಕ್ಕೆ ಮೂಲ ಕಾರಣ ಅವರ ನೀಡಿದ ಒಂದು ತೀರ್ಪು, ಅದು ಧಾರ್ಮಿಕ ಸಾಮರಸ್ಯಕ್ಕೆ ಧಕ್ಕೆಯಾಗಿದೆ ಎಂಬ ಆರೋಪ.

ತಿರುಪಾರಂಕುಂದ್ರಂ ಬೆಟ್ಟವು ಮದುರೈ ಬಳಿಯ ಪುಣ್ಯಕ್ಷೇತ್ರ. ಇದನ್ನು ದಕ್ಷಿಣ ಅಯೋಧ್ಯೆ ಎಂದು ಕರೆಯಲಾಗುತ್ತದೆ. ಬೆಟ್ಟದಲ್ಲಿ ಮುರುಗನ್ ಸ್ವಾಮಿ ಮತ್ತು ಕಾಶಿ ವಿಶ್ವನಾಥ ದೇವಸ್ಥಾನಗಳಿವೆ. ತುದಿಯಲ್ಲಿ ಸಿಕಂದರ್ ದರ್ಗಾ ಇದೆ. ಶ ತ ಮಾ ನ ಗ ಳಿಂ ದ ಹಿಂದೂ ಮತ್ತು ಮುಸ್ಲಿಂ ಸಮುದಾ ಯಗಳು ಭಾವೈಕ್ಯತೆಯಿಂದ ಇಲ್ಲಿನ ಆಚರಣೆಗಳಲ್ಲಿ ಭಾಗಿಯಾಗುತ್ತವೆ. ಪ್ರತಿ ಕಾರ್ತಿಕ ಮಾಸದಲ್ಲಿ ದೀಪಾರಾಧನೆ ನಡೆಯುತ್ತದೆ. ಸಾಂಪ್ರದಾಯಿಕವಾಗಿ ಇದು ಮುರುಗನ್ ಮತ್ತು ಕಾಶಿ ವಿಶ್ವನಾಥ ದೇವಸ್ಥಾನಗಳ ನಡುವಿನ ದೀಪ ಮಂಟಪಂನಲ್ಲಿ ನಡೆಯುತ್ತದೆ.

ಆದರೆ, ಹಿಂದೂ ಕಾರ್ಯಕರ್ತ ರಾಮ ರವಿಕುಮಾರ್ ಅವರು ಮದುರೈ ಪೀಠಕ್ಕೆ ಅರ್ಜಿ ಸಲ್ಲಿಸಿ, ದೀಪಾರಾಧನೆಯನ್ನು ಬೆಟ್ಟದ ತುಟ್ಟ ತುದಿಯಲ್ಲಿ ನಡೆಸಬೇಕು ಎಂದು ಕೋರಿದರು. ನ್ಯಾ. ಸ್ವಾಮಿನಾಥನ್ ಅವರು ಇದಕ್ಕೆ ಅನುಮತಿ ನೀಡಿದರು. ಇದು ಮುಸ್ಲಿಂ ಸಮುದಾಯದ ಭಾವನೆಗಳಿಗೆ ಧಕ್ಕೆಯಾಗಿದೆ ಎಂದು ವಿರೋಧಿಗಳು ಹೇಳುತ್ತಾರೆ. ಡಿಎಂಕೆ ಸರ್ಕಾರ ಈ ಆದೇಶವನ್ನು ಪಾಲಿಸದೆ ಹಳೆಯ ಸ್ಥಳದಲ್ಲೇ ದೀಪೋತ್ಸವ ನಡೆಸಿತು. ಇದರಿಂದ ಕೆರಳಿದ ರವಿಕುಮಾರ್ ಮತ್ತೆ ನ್ಯಾಯಾಲಯದ ಮೊರೆ ಹೋದರು.

ನ್ಯಾಯಪೀಠವು ಆದೇಶ ಉಲ್ಲಂಘನೆಯನ್ನು ಗಂಭೀರವಾಗಿ ಪರಿಗಣಿಸಿ, ರವಿಕುಮಾರ್ ಅವರಿಗೆ ಬೆಟ್ಟದ ಮೇಲೆ ದೀಪ ಹಚ್ಚಲು ಸೂಚಿಸಿತ್ತು. ಅವರ ಭದ್ರತೆಗಾಗಿ ಸಿಐಎಸ್ಎಫ್‌ನ 10 ಸಿಬ್ಬಂದಿಯನ್ನು ನಿಯೋಜಿಸಿತ್ತು. ಆದರೆ, ಡಿಎಂಕೆ ಸರ್ಕಾರ ಚೆನ್ನೈ ಮುಖ್ಯಪೀಠಕ್ಕೆ ಅರ್ಜಿ ಸಲ್ಲಿಸಿ ತಡೆಯಾಜ್ಞೆ ಪಡೆಯಿತು. ಇದರಿಂದ ಬೆಟ್ಟಕ್ಕೆ ಪ್ರವೇಶ ನಿಷೇಧಿಸಲಾಯಿತು. ಜಿಲ್ಲಾಧಿಕಾರಿ ರವಿಕುಮಾರ್ ಅವರನ್ನು ಬೆಟ್ಟ ಹತ್ತದಂತೆ ತಡೆದರು.

ಈ ಹಿನ್ನೆಲೆ ಫೆಬ್ರುವರಿಯಲ್ಲಿ ಮುಸ್ಲಿಂ ಮುಖಂಡರು ಬೆಟ್ಟದ ಹೆಸರನ್ನು ಸಿಕಂದರ್ ಮಲೈ ಎಂದು ಬದಲಾಯಿಸುವಂತೆ ಮನವಿ ಮಾಡಿದ್ದರು. ಇದು ವಿವಾದಕ್ಕೆ ಕಾರಣವಾಯಿತು. 1923ರಲ್ಲಿ ಬ್ರಿಟಿಷ್ ಕಾಲದ ತೀರ್ಪು ಬೆಟ್ಟವನ್ನು ಮುರುಗನ್ ದೇವಸ್ಥಾನಕ್ಕೆ ಸೇರಿದ್ದು ಎಂದು ಹೇಳಿತ್ತು. ಆದರೂ, ಸ್ಥಳೀಯರು ಭಾವೈಕ್ಯತೆಯಿಂದ ಇದ್ದರು. ಬಲಪಂಥೀಯ ಸಂಘಟನೆಗಳು ಪ್ರತಿಭಟನೆ ನಡೆಸಿದವು. ಅಮಿತ್ ಶಾ ಅವರಿಗೂ ವಿಚಾರ ತಲುಪಿತ್ತು. ಬಿಜೆಪಿ ಮುರುಗನ್ ಮಹಾಸಭಾ ನಡೆಸಿ ಧರ್ಮಜಾಗೃತಿ ಮೂಡಿಸಲು ಪ್ರಯತ್ನಿಸಿತ್ತು.

ಇತ್ತೀಚೆಗೆ ಬೆಟ್ಟದ ತುದಿಯಲ್ಲಿ ಮುಸ್ಲಿಮರು ಮಾಂಸಾಹಾರ ಸೇವಿಸಿದ್ದು ಮತ್ತೊಂದು ವಿವಾದಕ್ಕೆ ಕಾರಣವಾಯಿತು. ಬಲಪಂಥೀಯರು ಇದನ್ನು ದೇವರ ಅಪವಿತ್ರತೆ ಎಂದು ಕರೆದರು. ಅಕ್ಟೋಬರ್‌ನಲ್ಲಿ ನ್ಯಾಯಾಲಯವು ದರ್ಗಾ ಮುಂದೆ ಪ್ರಾಣಿ ಬಲಿ ನಿಷೇಧಿಸಿತ್ತು.

ಇಂಡಿಯಾ ಬ್ಲಾಕ್, ನ್ಯಾ. ಸ್ವಾಮಿನಾಥನ್ ಅವರು ಮತೀಯ ಸೂಕ್ಷ್ಮತೆಯನ್ನು ಅರ್ಥಮಾಡಿಕೊಳ್ಳದೆ ತೀರ್ಪು ನೀಡಿದ್ದಾರೆ ಎಂದು ಆರೋಪಿಸಿದೆ. ಇದು ಭಾವೈಕ್ಯತೆಗೆ ಧಕ್ಕೆಯಾಗಿದೆ. ಸ್ಥಳೀಯರು ತಮ್ಮ ನಡುವೆ ಭೇದಭಾವವಿಲ್ಲ ಎಂದು ಹೇಳುತ್ತಾರೆ. ಆದರೆ, ರಾಜಕೀಯ ಮತ್ತು ಧಾರ್ಮಿಕ ಗುಂಪುಗಳು ವಿವಾದವನ್ನು ಉಲ್ಬಣಗೊಳಿಸಿವೆ. ಈ ಪ್ರಕರಣ ಧಾರ್ಮಿಕ ಸಾಮರಸ್ಯ ಮತ್ತು ನ್ಯಾಯಾಂಗದ ಪಾತ್ರದ ಬಗ್ಗೆ ಚರ್ಚೆಯನ್ನು ಹುಟ್ಟುಹಾಕಿದೆ.

# ನಕಲಿ ಪ್ರಮಾಣಪತ್ರ ನೀಡಿ ಸಾರಿಗೆ ಇಲಾಖೆಗೆ ಮೋಸ: ಬಂಧನಕ್ಕೆ ಶರವಣ ಆಗ್ರಹ





**ಬೆಳಗಾವಿ**: ವಿಧಾನ ಮಂಡಲದಲ್ಲಿ ಮೂರನೇ ದಿನವೂ ಚಳಿಗಾಲದ ಅಧಿವೇ ಶನ ಮುಂದುವರೆದಿದ್ದು, ಅಧಿವೇಶನದಲ್ಲಿ ಇಂದು ಶರವಣ ಸಾರಿಗೆ ಇಲಾಖೆಯ ವಿರುದ್ಧ ನಕಲಿ ಸೇವಾನುಭವ ಪ್ರಮಾಣಪತ್ರ ನೀಡಿ ಕೆಲಸ ನಿರ್ವಹಿಸುತ್ತಿದ್ದಾರೆ ಎಂದು ಆರೋಪ ಮಾಡಿದ್ದಾರೆ.

ಸಾರಿಗೆ ಇಲಾಖೆಯಲ್ಲಿ ವಾಹನ ತಪಾಸಣೆಯ ಇನ್ಸ್ಪೆಕ್ಟರ್ ಹುದ್ದೆಗೆ ಬಡ್ತಿ ಪಡೆಯಲು ಸುಮಾರು 50 ಗ್ರೂಪ್ ಲಿಪಿಕ ಸಿಬ್ಬಂದಿ ತಾಂತ್ರಿಕ ಶಿಕ್ಷಣದ ನಕಲಿ ಸೇವಾನುಭವ ಪ್ರಮಾಣಪತ್ರ ನೀಡಿ, ಸಂಜೆ ಪಾಲಿಟೆಕ್ನಿಕ್ ಕಾಲೇಜ್‌ನಲ್ಲಿ ಓದುತ್ತಿರುವ ಆರೋಪವಿದೆ ಈ ಸಂಬಂಧ ಎಸ್ಐಟಿ ರಚಿಸಿ ತನಿಖೆ ನಡೆಸಬೇಕು ಎಂದು ವಿಧಾನ ಪರಿಷತ್ ಶಾಸಕ ಟಿ.ಎ.ಶರವಣ ಒತ್ತಾಯಿಸಿದರು. ಸಾರಿಗೆ ಅಕ್ರಮದ ಕುರಿತು ಶರವಣ ಕೇಳಿದ ಚುಕ್ಕೆ ಗುರುತಿನ ಪ್ರಶ್ನೆಗೆ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಉತ್ತರಿಸಿ, ಸಾರಿಗೆ ಇಲಾಖೆಯ ಲಿಪಿಕ ಸಿಬ್ಬಂದಿ ಕಾನೂನು ಬಾಹಿರವಾಗಿ ನಕಲಿ ಸೇವಾನುಭವ ಪ್ರಮಾಣ ಪತ್ರ ಪಡೆದಿರುವುದು ಇನ್ನೂ ತನಿಖೆಯ ಹಂತದಲ್ಲಿದೆ. ಈ ಆರೋಪ ನಿಜವಾಗಿದ್ದರೆ ಶೀಘ್ರದಲ್ಲಿ ತಪ್ಪಿತಸ್ಥರ ವಿರುದ್ಧ ನಿಯಮಾನುಸಾರ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ರಾಮಲಿಂಗರೆಡ್ಡಿ ಭರವಸೆ ನೀಡಿದ್ದಾರೆ. ಸಾರಿಗೆ ಇಲಾಖೆ ಭಡ್ತಿ ಹಿಂದೆ ಕೋಟ್ಯಂತರ ರೂಪಾಯಿ ಅಕ್ರಮ ನಡೆದಿರುವ ಅನುಮಾನವಿದೆ. ಇಲಾಖೆಯ ನೇಮಕಾತಿ ಹಾಗೂ ಬಡ್ತಿ ನಿಯಮಾ ವ ಳಿ ಯೇ ದೋಷಪೂರಿತವಾಗಿದೆ. ಇದರ ಹಿಂದೆ ವ್ಯವಸ್ಥಿತ ಜಾಲವೇ ಇದ್ದು, ಸರ್ಕಾರ ತಕ್ಷಣ ಎಸ್ಐಟಿ ರಚನೆ ಮಾಡಿ, ಶಿಕ್ಷಣ ಸಂಸ್ಥೆ ಮೇಲೆ ತನಿಖೆ ನಡೆಸಬೇಕು. ವ್ಯಾಸಂಗ ಮಾಡುತ್ತಿರುವ ಇಲಾಖಾ ಸಿಬ್ಬಂದಿಯ ದಾಖಲೆಗಳನ್ನು ವಶಪಡಿಸಿಕೊಂಡು ತನಿಖೆ ನಡೆಸಬೇಕು.

ವಂಚನೆ ಮಾಡಿರುವ ಅಭ್ಯರ್ಥಿಗಳನ್ನು ಬಂಧಿಸಬೇಕು. ಕ್ರಿಮಿನಲ್ ಮೊಕದ್ದಮೆ ದಾಖಲು ಮಾಡಬೇಕು ಎಂದು ಶರವಣ ಆಗ್ರಹಿಸಿದರು. ಎಸ್ಎಸ್ಎಲ್‌ಸಿ ಉತ್ತೀರ್ಣರಾದರೆ ಸಾಕು, ಇನ್ಸ್‌ಪೆಕ್ಟರ್ ಆಫ್ ಮೋಟಾರ್ ವೆಹಿಕಲ್ ಹುದ್ದೆಯನ್ನು ಪಡೆಯಬಹುದು ಎಂದು ಕಾಯ್ದೆಗೆ ತಿದ್ದುಪಡಿ ತರಲಾಗಿದೆ. ಈ ತಿದ್ದುಪಡಿಯೇ ಅಕ್ರಮವಾಗಿದೆ. ಇಲಾಖೆಯಲ್ಲಿ ಇರುವ ಸಿಬ್ಬಂದಿಗೆ ಬಡ್ತಿಯಲ್ಲಿ ಮೀಸಲಾತಿ ಕೊಡಬೇಕು ಎನ್ನುವ ನೆಪದಲ್ಲಿ ಶೇಕಡಾ 5ರಷ್ಟು ಮೀಸಲಾತಿ ನೀಡಿ ಕಾಯ್ದೆಗೆ ತಿದ್ದುಪಡಿ ತರಲಾಗಿದೆ. ಮೂಲತಃ ಈ ತಿದ್ದುಪಡಿಯೇ ದೋಷಪೂರಿತವಾಗಿದೆ.


ಇಂಥ ಉನ್ನತ ಹುದ್ದೆಗಳಿಗೆ ಇಲಾಖಾವಾರು ಬಡ್ತಿ ನೀಡಬೇಕಾದರೆ ತಾಂತ್ರಿಕ ಶಿಕ್ಷಣದ ಅಗತ್ಯವಿದೆ. ಎಸ್ಎಸ್ಎಲ್‌ಸಿ ಪಾಸ್ ಮಾಡಿಕೊಂಡು ಇಲಾಖೆಯಲ್ಲಿ ಚಾಲಕ, ಪ್ರಥಮ ದರ್ಜೆ ಸಹಾಯಕ(ಎಫ್‌ಡಿಎ) ಆದವರು ಇನ್ಸ್‌ಪೆಕ್ಟರ್ ಆಫ್ ಮೋಟಾರ್ ವೆಹಿಕಲ್ ಹುದ್ದೆಗೇರಲು ಹೇಗೆ ಸಾಧ್ಯವಿದೆ ಎಂದು ಶರವಣ ಅವರು ಪ್ರಶ್ನಿಸಿದರು. ಹಾಗಾಗಿ ಸರ್ಕಾರದ ನೇಮಕಾತಿಯೇ ದೋಷಪೂರಿತವಾಗಿ ಆಗಿದೆ. ಇದರಿಂದ ಹಿಂದೆ ದೊಡ್ಡ ಜಾಲವೇ ಕಾರ್ಯ ನಿರ್ವಹಿಸುತ್ತಿದೆ ಎಂದು ಆರೋಪ ಮಾಡಿದ್ದಾರೆ

ಎಸ್ಎಸ್ಎಲ್‌ಸಿ ಓದಿದ ಮೇಲೆ ನೋಂದಾಯಿತ ತಾಂತ್ರಿಕ ಶಿಕ್ಷಣ ಸಂಸ್ಥೆಗಳಲ್ಲಿ ಕನಿಷ್ಠ 2 ವರ್ಷ ಓದಿನ ಜೊತೆಗೆ ಕಾರ್ಯ ನಿರ್ವಹಣೆ ಮಾಡಿ ಅನುಭವ ಪಡೆದಿರಬೇಕು. ನಂತರ ಡಿಪ್ಲೊಮಾ ತಾಂತ್ರಿಕ ಶಿಕ್ಷಣಕ್ಕೆ ಅರ್ಹತೆ ಪಡೆಯುತ್ತಾರೆ. ಆ ನಂತರ ಇನ್ಸ್‌ಪೆಕ್ಟರ್ ಆಫ್ ಮೋಟಾರ್ ವೆಹಿಕಲ್ ಹುದ್ದೆಗೆ ಅವರು ಆಯ್ಕೆಯಾಗಲು ಅರ್ಹತೆ ಹೊಂದುತ್ತಾರೆ. ರಾತ್ರಿ ಡಿಪ್ಲೊಮಾ ಕಾಲೇಜಿನಲ್ಲಿ ಓದಲು ಕಚೇರಿಯಿಂದ ಕಾಲೇಜ್ 30 ಕಿಮೀ ವ್ಯಾಪ್ತಿಯ ಒಳಗಿರಬೇಕು ಎಂದಿದೆ. ಆದರೆ, ಬೆಂಗಳೂರು ಮಲ್ಲೇಶ್ವರಂ ಕಾಲೇಜಿನಲ್ಲಿ ತುಮಕೂರು, ಕಲಬುರಗಿ ಭಾಗದವರೂ ಓದಿದ್ದೇವೆ ಎಂದು ಪ್ರಮಾಣಪತ್ರ ನೀಡಿದ್ದಾರೆ. ಸಾಯಂಕಾಲ 5 ಗಂಟೆಯವರೆಗೆ ಕೆಲಸ ಮಾಡಿ, ನೂರಾರು ಕಿಮೀ ದೂರದ ಕಾಲೇಜ್‌ಗೆ ಹೇಗೆ ಬರಲು ಸಾಧ್ಯ ಎಂದು ಶರವಣ ಅವರು ಪ್ರಶ್ನಿಸಿದರು.

ಎರಡು ವರ್ಷದ ತಾಂತ್ರಿಕ ಶಿಕ್ಷಣ ಪಡೆದರೆ ಮಾತ್ರ ಸಂಜೆ ಕಾಲೇಜ್‌ನಲ್ಲಿ ಡಿಪ್ಲೊಮಾ ಶಿಕ್ಷಣಕ್ಕೆ ಪ್ರವೇಶ ಪಡೆಯಲು ಅರ್ಹತೆ ಇರುತ್ತದೆ. ಆದರೆ, ಈ ಷರತ್ತುಗಳನ್ನು ಸಂಪೂರ್ಣವಾಗಿ ಉಲ್ಲಂಘಿಸಲಾಗಿದೆ. ತಾಂತ್ರಿಕ ಶಿಕ್ಷಣ, ಅನುಭವ ಇಲ್ಲದ ಕ್ಲಾರಿಕಲ್, ಪ್ರಥಮ ದರ್ಜೆ ಸಹಾಯಕ, ದ್ವಿತೀಯ ದರ್ಜೆ ಸಹಾಯಕರು ಕೂಡ ನಕಲಿ ತಾಂತ್ರಿಕ ಶಿಕ್ಷಣದ ಅನುಭವದ ಪ್ರಮಾಣಪತ್ರ ನೀಡಿ, ಇನ್ಸ್ಪೆಕ್ಟರ್ ಆಫ್ ಮೋಟಾರ್ ವೆಹಿಕಲ್ ಆಗಬೇಕು ಅನ್ನುವ ಕಾರಣಕ್ಕೆ ಜೆಪಿ ನಗರದ ಆಕ್ಸ್‌ಫರ್ಡ್ ಸಂಜೆ ಪಾಲಿಟೆಕ್ನಿಕ್ ಕಾಲೇಜ್‌ನಲ್ಲಿ ಪ್ರವೇಶ ಪಡೆದಿದ್ದಾರೆ. 42 ಜನ ಅಲ್ಲಿಯದ್ದೇ ಪ್ರಮಾಣಪತ್ರ ನೀಡಿದ್ದಾರೆ. ಇದೊಂದು ಕಾನೂನು ಬಾಹಿರ ಅಪರಾಧವಾಗಿದೆ ಮತ್ತುಈಗಾಗಲೇ ಕಾರ್ಯನಿರ್ವಹಿಸುತ್ತಿರುವ ಇಲಾಖೆಗೆ ಮಾಡುವ ವಂಚನೆಯಾಗಿದೆ. ಈ ಬಗ್ಗೆ ತನಿಖೆ ನಡೆಯಬೇಕು ಎಂದು ಶರವಣ ಒತ್ತಾಯಿಸಿದರು.

ಅರೆಕಾಲಿಕ ಡಿಪ್ಲೊಮಾ ಕೋರ್ಸ್‌ಗಳ ಪ್ರವೇಶಾತಿಗೆ 2 ವರ್ಷಗಳ ತಾಂತ್ರಿಕ ಸೇವಾನುಭವದೊಂದಿಗೆ ಸಂಬಂಧಪಟ್ಟ ತಾಂತ್ರಿಕ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿರಬೇಕು. ದೂರಿನಲ್ಲಿ ನಮೂದಿಸಿದ 49 ಅಭ್ಯರ್ಥಿಗಳ ಪ್ರವೇಶದ ಸಂಪೂರ್ಣ ತನಿಖಾ ವರದಿಯನ್ನು ಲಗತ್ತಿಸಿ, 2 ವರ್ಷಗಳ ತಾಂತ್ರಿಕ ಸೇವಾನುಭವದ ನೈಜತೆಯನ್ನು ಪರಿಶೀಲಿಸಿ ಸೂಕ್ತ ತೀರ್ಮಾನ ಕೈಗೊಳ್ಳುವಂತೆ ವರದಿ ನೀಡಿದ್ದಾರೆ. ಆದರೆ, ಸಾರಿಗೆ ಇಲಾಖೆಯಿಂದ ತಾಂತ್ರಿಕ ಸೇವಾನುಭವದ ನೈಜತೆಯನ್ನು ಪರಿಶೀಲಿಸಲು ಅವಕಾಶ ಇಲ್ಲದಿರುವುದರಿಂದ ತಾಂತ್ರಿಕ ಶಿಕ್ಷಣ ಇಲಾಖೆಯಿಂದಲೇ ಪರಿಶೀಲನೆ ನಡೆಸಿ ಕೊಡಬೇಕು ಎಂದು ಸಾರಿಗೆ ಇಲಾಖೆ ಆಯುಕ್ತರು ಮರು ಪತ್ರ ಬರೆದಿದ್ದಾರೆ.

# ಚಾಲಕನ ನಿಯಂತ್ರಣ ತಪ್ಪಿ KSRTC ಬಸ್ ಪಲ್ಟಿ ಚಿಕಿತ್ಸೆ ಫಲಕಾರಿಯಾಗದೇ ಕಂಡಕ್ಟರ್ ಸಾವು



**ರಾಯಚೂರು:** ಚಾಲಕನ ನಿಯಂತ್ರಣ ತಪ್ಪಿ ಬಸ್ ಪಲ್ಟಿಯಾಗಿ ಕಂಡಕ್ಟರ್ ಸಾವನ್ನಪ್ಪಿರುವ ಘಟನೆ ಜಿಲ್ಲೆಯ ದೇವದುರ್ಗ ತಾಲೂ ಕಿನ ಅಂಚೇ ಸುಗೂರು ಕಾಲುವೆಯ ಸೇತು ವೆ ಬಳಿ ನಡೆದಿದೆ ಮೃತ ಕಂಡಕ್ಟರ್‌ನ್ನು ಬಸವರಾಜ್ ಎಂದು ಗುರುತಿಸಲಾಗಿದ್ದು, ಅಪಘಾತದಲ್ಲಿ 38 ಜನರು ಗಾಯಗೊಂ ಡಿದ್ದಾರೆ ಕೆಎಸ್‌ಆರ್‌ಟಿಸಿ ಬಸ್ ಅಂಜಳ ಗ್ರಾಮದಿಂದ ದೇವದುರ್ಗಕ್ಕೆ ವಾಪಸ್ಸಾಗುತ್ತಿತ್ತು. ಈ ವೇಳೆ ಅಂಚೇಸುಗೂರು ಕಾಲುವೆಯ ಸೇತುವೆ ದಾಟುವಾಗ ಈ ದುರ್ಘಟನೆ ಸಂಭವಿಸಿದೆ. ಚಾಲಕನ ನಿಯಂತ್ರಣ ತಪ್ಪಿ ಬಸ್ ಪಲ್ಟಿ ಹೊಡೆದಿದ್ದು, ಪರಿಣಾಮ ಬಸ್‌ನಲ್ಲಿದ್ದ 40 ಜನರ ಪೈಕಿ 38 ಜನರು ಗಾಯಗೊಂಡಿದ್ದಾರೆ. ಅಪಘಾತದಲ್ಲಿ ತೀವ್ರವಾಗಿ ಗಾಯಗೊಂಡಿದ್ದ ಕಂಡಕ್ಟರ್ ಚಿಕಿತ್ಸೆ ಫಲಕಾರಿಯಾಗದೇ ರಾಯಚೂರಿನ ರಿಮ್ಸ್ ಆಸ್ಪತ್ರೆಯಲ್ಲಿ ಸಾವನ್ನಪ್ಪಿದ್ದಾರೆ.



ಜಮೀನಿನಲ್ಲಿ ಕೆಲಸ ಮಾಡುತ್ತಿದ್ದ ರೈತರು ಕೂಡಲೇ ಧಾವಿಸಿ, ಪ್ರಯಾಣಿಕರನ್ನ ರಕ್ಷಣೆ ಮಾಡಿದ್ದಾರೆ. ಸಲಾಕೆಗಳಿಂದ ಬಸ್‌ನ ಗಾಜು ಒಡೆದು, ಪ್ರಯಾಣಿಕರ ರಕ್ಷಣೆ ಮಾಡಲಾಗಿದೆ. ಎಷ್ಟು ಹೊತ್ತಾದರೂ ಆಂಬ್ಯುಲೆನ್ಸ್ ಬಾರದ ಕಾರಣ ಟಂಟಂ, ಬೈಕ್‌ಗಳಲ್ಲಿ ಗಾಯಾಳುಗಳನ್ನ ರವಾನೆ ಮಾಡಿ, ಆಸ್ಪತ್ರೆಗೆ ದಾಖಲಿಸಲಾಗಿದೆ. ದೇವದುರ್ಗ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ

# ಮಧ್ಯವರ್ತಿಗಳು ಪತ್ತೆಯಾದರೆ ಅಧಿಕಾರಿಗಳ ವಿರುದ್ಧ ಕಠಿನ ಕ್ರಮಕ್ಕೆ ಎಚ್ಚರಿಕೆ: ರಾಮಲಿಂಗಾ ರೆಡ್ಡಿ



**ಬೆಳಗಾವಿ:** ಕಚೇರಿಯಲ್ಲಿ ಸಾರ್ವ ಜನಿಕರಿಗೆ ತೊಂದರೆ ಯಾಗುವಂತೆ ಮಧ್ಯವರ್ತಿಗಳ ಹಾವಳಿಗೆ ಅವಕಾಶ ನೀಡಿದ್ರೆ, RTO ಕಚೇರಿ ಅಧಿಕಾರಿಗಳನ್ನೇ ಹೊಣೆಯಾಗಿಸಿ, ಶಿಸ್ತುಕ್ರಮಕ್ಕೆ ಗುರಿಪಡಿಸಲಾಗುವುದು ಎಂದು ಸಚಿವ ರಾಮಲಿಂಗಾ ರೆಡ್ಡಿ ಎಚ್ಚರಿಕೆ ನೀಡಿದರು. ವಿಧಾನ ಪರಿಷತ್ ಪ್ರಶ್ನೋತ್ತರ ಕಲಾಪದಲ್ಲಿ ಕಾಂಗ್ರೆಸ್ ಸದಸ್ಯೆ ಉಮಾಶ್ರೀ ಅವರ ಪ್ರಶ್ನೆಗೆ ಉತ್ತರ ನೀಡಿದ ಅವರು, ಆರ್‌ಟಿಓ ಕಚೇರಿಗಳಲ್ಲಿ ಶಿಸ್ತು ತರಲು ಅನೇಕ ಕ್ರಮವಹಿಸಲಾಗಿದೆ.

ಕಚೇರಿಯಲ್ಲಿ ಸ್ವೀಕೃತವಾಗುವ ಎಲ್ಲಾ ಅರ್ಜಿ, ಸ್ವೀಕೃತಿಗಳನ್ನು ನಿಗದಿಪಡಿಸಿದ ನಮೂನೆಯಲ್ಲಿ ಕಡ್ಡಾಯವಾಗಿ ವಿಷಯ ನಿರ್ವಾಹಕರು ನಿರ್ವಹಿಸುವುದು. ಅಧೀಕ್ಷಕರು ಪ್ರತಿ ವಾರಕ್ಕೊಮ್ಮೆ ವಹಿಗಳನ್ನು ಪರಿಶೀಲಿಸುವುದು ಹಾಗೂ ತಿಂಗಳಿಗೊಮ್ಮೆ ಮೇಜು ತಪಾಸಣೆಯನ್ನ ನಡೆಸಿ ಮೇಲಾಧಿಕಾರಿಗಳಿಗೆ ವರದಿ ಸಲ್ಲಿಸುವಂತೆ ಸಾರಿಗೆ ಆಯುಕ್ತರು ಸುತ್ತೋಲೆ ಹೊರಡಿಸಿ ಸೂಚನೆ ನೀಡಿದ್ದಾರೆ ಎಂದರು.

ಕಚೇರಿಗಳಲ್ಲಿ ಮಧ್ಯವರ್ತಿಗಳಿಗೆ ಯಾವುದೇ ರೀತಿಯ ಅವಕಾಶ ಕಲ್ಪಿಸದಂತೆ, ಒಂದು ವೇಳೆ ಯಾವುದೇ ಕಚೇರಿಯಲ್ಲಿ ಮಧ್ಯವರ್ತಿಗಳು ಕಂಡುಬಂದಲ್ಲಿ ಆಯಾ ಕಚೇರಿಯ ಅಧಿಕಾರಿಗಳನ್ನು ಹೊಣೆಗಾರರನ್ನಾಗಿ ಮಾಡಿ ನಿಯಮಾನುಸಾರ ಶಿಸ್ತುಕ್ರಮ ಕೈಗೊಳ್ಳಲಾಗುವುದು ಎಚ್ಚರಿಸಿದರು ಸಾರ್ವಜನಿಕರು ಮಧ್ಯವರ್ತಿಗಳನ್ನ ಸಂಪರ್ಕಿಸದೇ ನೇರವಾಗಿ ಕಚೇರಿಯ ಅಧಿಕಾರಿ, ಸಿಬ್ಬಂದಿಯನ್ನು ಭೇಟಿ ಮಾಡಿ ಅವರ ಕೆಲಸಗಳನ್ನು ಮಾಡಿಸಿಕೊಳ್ಳಬೇಕೆಂದು ಆರ್‌ಟಿಓ ಕಚೇರಿಗಳ ಆವರಣದಲ್ಲಿ ಸೂಚನಾ ಫಲಕಗಳನ್ನು ಅಳವಡಿಸಲಾಗಿದೆ ಎಂದರು

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.